ಸಂಪುಟ 01 | ಸಂಚಿಕೆ 188 ಶನಿವಾರ 12 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) National Video Games Day ?
ವಿಡಿಯೋ ಗೇಮ್‌ಗಳ ಮನರಂಜನೆ, ತಂತ್ರಜ್ಞಾನ ಮತ್ತು ಗೇಮಿಂಗ್ ಸಂಸ್ಕೃತಿಯನ್ನು ಆಚರಿಸುವ ದಿನ.

2)World First Aid Day ? ಪ್ರಥಮ ಚಿಕಿತ್ಸೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಮತ್ತು ತುರ್ತು ಸಂದರ್ಭಗಳಲ್ಲಿ ಸಹಾಯ ಮಾಡುವ ಕೌಶಲ್ಯಗಳ ಮಹತ್ವವನ್ನು ತಿಳಿಸುವ ದಿನ.

3)National Day of Encouragement ಅನ್ನು ಪ್ರತಿವರ್ಷ ಸೆಪ್ಟೆಂಬರ್ 12ರಂದು ಆಚರಿಸಲಾಗುತ್ತದೆ.
ಇದು ಇತರರನ್ನು ಪ್ರೋತ್ಸಾಹಿಸುವುದು, ಧೈರ್ಯ ತುಂಬುವುದು ಮತ್ತು ಸಕಾರಾತ್ಮಕ ಮಾತುಗಳ ಮೂಲಕ ಆತ್ಮವಿಶ್ವಾಸ ಹೆಚ್ಚಿಸುವುದು ಎಂಬ ಸಂದೇಶವನ್ನು ನೀಡುವ ದಿನ.

4)National Chocolate Milkshake Day ಅನ್ನು ಪ್ರತಿವರ್ಷ ಸೆಪ್ಟೆಂಬರ್ 12 ರಂದು ಆಚರಿಸಲಾಗುತ್ತದೆ. ಉದ್ದೇಶ: ಚಾಕೊಲೇಟ್ ಮಿಲ್ಕ್‌ಶೇಕ್‌ನ ಜನಪ್ರಿಯತೆ ಮತ್ತು ರುಚಿಯನ್ನು ಸಂಭ್ರಮಿಸುವ ದಿನ.

## ಸುಭಾಷಿತ

ನಿಮ್ಮ ಅಸುರಕ್ಷಿತ ಆಲೋಚನೆಗಳು ನಿಮಗೆ ಹಾನಿ ಮಾಡಿದಷ್ಟು, ಬದ್ಧವೈರಿಯೂ ಮಾಡಲಾರ.

-ಗೌತಮ ಬುದ್ಧ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.


# ಬ್ರಿಕ್ಸ್ ಶೃಂಗಸಭೆ: ದೆಹಲಿಯಲ್ಲಿ ಹೈ ಅಲರ್ಟ್, 15 ಸಾವಿರ ಪೊಲೀಸರ ನಿಯೋಜನೆ

ನೈಜ್ಯ ದೆಸೆ ನ್ಯೂಸ್

ನವದೆಹಲಿ: ವಾರಾಂತ್ಯದಲ್ಲಿ ಭಾರತ ಮಂಟಪದಲ್ಲಿ ನಡೆಯಲಿರುವ 18ನೇ ಬ್ರಿಕ್ಸ್ ಶೃಂಗಸಭೆಗೆ ವಿಶ್ವದ ಪ್ರಮುಖ ನಾಯಕರು ಭಾರತಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ಗಣ್ಯರ ಸಂಚಾರದ ಹಿನ್ನೆಲೆಯಲ್ಲಿ ಹಲವು ಪ್ರಮುಖ ರಸ್ತೆಗಳಲ್ಲಿ ತಾತ್ಕಾಲಿಕ ಸಂಚಾರ ನಿರ್ಬಂಧ, ಮಾರ್ಗ ಬದಲಾವಣೆ ಹಾಗೂ ವಾಹನಗಳ ಸಂಚಾರಕ್ಕೆ ತಡೆ ಉಂಟಾಗುವ ಸಾಧ್ಯತೆಯಿದೆ.

ಶೃಂಗಸಭೆಯ ಭದ್ರತೆಗಾಗಿ ಸುಮಾರು 15,000 ದೆಹಲಿ ಪೊಲೀಸ್ ಸಿಬ್ಬಂದಿ, ಅರೆಸೇನಾ ಪಡೆಗಳ 200 ತುಕಡಿಗಳು ಹಾಗೂ 500ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳನ್ನು ನಗರದಾದ್ಯಂತ ನಿಯೋಜಿಸಲಾಗಿದೆ. ನಾಳೆಯಿಂದ ಆರಂಭವಾಗಲಿರುವ ಎರಡು ದಿನಗಳ ಶೃಂಗಸಭೆ ಹಿನ್ನೆಲೆಯಲ್ಲಿ ದೆಹಲಿ ಹೈ ಅಲರ್ಟ್‌ನಲ್ಲಿದೆ. ನಗರವನ್ನು ಸಂಪೂರ್ಣ ಬಂದ್ ಮಾಡುವುದಿಲ್ಲ ಎಂದು ದೆಹಲಿ ಸಂಚಾರ ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಆದರೆ, ಗಣ್ಯರ ವಾಹನಗಳ ಸಂಚಾರವಿರುವ ಮಾರ್ಗಗಳಲ್ಲಿ ತಾತ್ಕಾಲಿಕ ತಡೆ, ಸಂಚಾರ ಮಾರ್ಗ ಬದಲಾವಣೆ ಮತ್ತು ನಿರ್ಬಂಧಗಳನ್ನು ವಿಧಿಸುವ ಸಾಧ್ಯತೆಯಿದೆ.

ಭದ್ರತಾ ವ್ಯವಸ್ಥೆಗಳಿಗೆ ಅನುಕೂಲವಾಗಿರುವ ಪ್ರದೇಶಗಳಲ್ಲಿ ವಾಹನ ಸಂಚಾರ ಎಂದಿನಂತೆ ಮುಂದುವರಿಯಲಿದೆ. ವಿದೇಶಿ ಗಣ್ಯರ ಸಂಚಾರದ ವೇಳೆ ವಾಹನಗಳನ್ನು ತಡೆಯುವ ಅವಧಿ ನಿಗದಿತವಾಗಿರುವುದಿಲ್ಲ. ಭದ್ರತಾ ಪರಿಸ್ಥಿತಿ ಹಾಗೂ ಸ್ಥಳೀಯ ಸ್ಥಿತಿಗತಿಗಳನ್ನು ಆಧರಿಸಿ ಹಂತ ಹಂತವಾಗಿ ವಾಹನ ಸಂಚಾರಕ್ಕೆ ಅವಕಾಶ ನೀಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.




### 500ಕ್ಕೂ ಹೆಚ್ಚು ಕ್ಯಾಮೆರಾಗಳಿಂದ ನಿಗಾ

ವಿಮಾನ ನಿಲ್ದಾಣ, ಗಣ್ಯರು ತಂಗುವ ಹೋಟೆಲ್‌ಗಳು, ಭಾರತ ಮಂಟಪ ಹಾಗೂ ಅವರು ಭೇಟಿ ನೀಡುವ ಇತರ ಸ್ಥಳಗಳನ್ನು ಒಳಗೊಂಡಂತೆ ವ್ಯಾಪಕ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ನವದೆಹಲಿ ಪ್ರದೇಶದಲ್ಲಿ ಹೈ-ರೆಸಲ್ಯೂಶನ್ ಕ್ಯಾಮೆರಾಗಳು, ಮುಖ ಗುರುತಿಸುವ ವ್ಯವಸ್ಥೆ ಹಾಗೂ ವಾಹನಗಳ ನಂಬರ್ ಪ್ಲೇಟ್ ಓದುವ ಕ್ಯಾಮೆರಾಗಳು ಸೇರಿದಂತೆ 500ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳ ಮೂಲಕ 24 ಗಂಟೆಯೂ ನಿಗಾ ವಹಿಸಲಾಗುವುದು. ಶೃಂಗಸಭೆ ನಡೆಯುವ ಸ್ಥಳ ಹಾಗೂ ಗಣ್ಯರು ತಂಗುವ ಹೋಟೆಲ್‌ಗಳಲ್ಲಿ ಪ್ರವೇಶ ನಿಯಂತ್ರಣ, ತಪಾಸಣೆ, ಗುಪ್ತಚರ ಮಾಹಿತಿ ಸಂಗ್ರಹ, ಸಂಚಾರ ನಿರ್ವಹಣೆ ಮತ್ತು ತುರ್ತು ಸ್ಪಂದನಾ ವ್ಯವಸ್ಥೆಗಳನ್ನು ಬಲಪಡಿಸಲಾಗಿದೆ.

### 35ಕ್ಕೂ ಹೆಚ್ಚು ರಸ್ತೆಗಳಲ್ಲಿ ವ್ಯತ್ಯಯ

ಶೃಂಗಸಭೆಯ ಅವಧಿಯಲ್ಲಿ 35ಕ್ಕೂ ಹೆಚ್ಚು ರಸ್ತೆಗಳಲ್ಲಿ ಸಂಚಾರ ವ್ಯತ್ಯಯ ಉಂಟಾಗಬಹುದು ಎಂದು ಸಂಚಾರ ಪೊಲೀಸರು ತಿಳಿಸಿದ್ದಾರೆ. ಮಥುರಾ ರಸ್ತೆ, ಸರ್ದಾರ್ ಪಟೇಲ್ ಮಾರ್ಗ, ಶಾಂತಿ ಪಥ, ಜನಪಥ, ಅಶೋಕ ರಸ್ತೆ, ಬರಾಖಂಬ ರಸ್ತೆ, ಟಾಲ್‌ಸ್ಟಾಯ್ ಮಾರ್ಗ, ಆಫ್ರಿಕಾ ಅವೆನ್ಯೂ ರಸ್ತೆ, ನೀತಿ ಮಾರ್ಗ, ಪಂಚಶೀಲ ಮಾರ್ಗ ಹಾಗೂ ಎಪಿಜೆ ಅಬ್ದುಲ್ ಕಲಾಂ ರಸ್ತೆ ಪ್ರಮುಖವಾಗಿ ಬಾಧಿತವಾಗುವ ಸಾಧ್ಯತೆಯಿದೆ.

ನೋಯ್ಡಾ, ಮಧ್ಯ ದೆಹಲಿ, ಪೂರ್ವ ದೆಹಲಿ ಮಧ್ಯ ದೆಹಲಿ ಹಾಗೂ ದ್ವಾರಕಾ ಮತ್ತು ಪಶ್ಚಿಮ ದೆಹಲಿಯಿಂದ ಧೌಲಾ ಕುವಾನ್, ವಿಮಾನ ನಿಲ್ದಾಣ ಮತ್ತು ದಕ್ಷಿಣ ದೆಹಲಿಯತ್ತ ಸಂಚರಿಸುವವರಿಗೆ ಹೆಚ್ಚಿನ ಪರಿಣಾಮ ಉಂಟಾಗಬಹುದು. ಸಾಕೇತ್‌ನಲ್ಲಿರುವ ಹೋಟೆಲ್ ಮತ್ತು ಮಧ್ಯ ದೆಹಲಿಯ ನಡುವಿನ ಈಜಿಪ್ಟ್ ನಿಯೋಗದ ಸಂಚಾರದಿಂದ ದಕ್ಷಿಣ ದೆಹಲಿಯ ರಸ್ತೆಗಳಲ್ಲಿ, ವಿಶೇಷವಾಗಿ ಪೀಕ್ ಅವರ್‌ಗಳಲ್ಲಿ, ವಾಹನ ದಟ್ಟಣೆ ಹೆಚ್ಚುವ ಸಾಧ್ಯತೆಯಿದೆ.

### ದಿನಕ್ಕೆ 70-80 ಬಾರಿ ಗಣ್ಯರ ಸಂಚಾರ

ಶೃಂಗಸಭೆಯ ಹಿನ್ನೆಲೆಯಲ್ಲಿ ಪ್ರತಿದಿನವೂ ಹಲವು ಬಾರಿ ಉನ್ನತ ಭದ್ರತೆಯೊಂದಿಗೆ ಗಣ್ಯರ ಸಂಚಾರ ನಡೆಸಬೇಕಾಗುತ್ತದೆ. ನಾಯಕರು ವಿಮಾನ ನಿಲ್ದಾಣ, ಹೋಟೆಲ್, ಶೃಂಗಸಭೆಯ ಸ್ಥಳ ಹಾಗೂ ದ್ವಿಪಕ್ಷೀಯ ಸಭೆಗಳು ಮತ್ತು ಇತರ ಕಾರ್ಯಕ್ರಮಗಳ ನಡುವೆ ಸಂಚರಿಸಬೇಕಾಗಿರುವುದರಿಂದ ಒಂದೇ ದಿನದಲ್ಲಿ ನಗರದಾದ್ಯಂತ 70-80 ಅಥವಾ ಅದಕ್ಕಿಂತ ಹೆಚ್ಚು ಬಾರಿ ಉನ್ನತ ಭದ್ರತಾ ಸಂಚಾರ ವ್ಯವಸ್ಥೆ ಮಾಡಬೇಕಾಗಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರತಿ ಸಂಚಾರಕ್ಕೂ ಪ್ರತ್ಯೇಕ ಸಂಚಾರ ನಿಯಂತ್ರಣ, ಪ್ರವೇಶ ನಿರ್ಬಂಧ ಮತ್ತು ಮಾರ್ಗ ಸಮನ್ವಯದ ಅಗತ್ಯವಿರುವುದರಿಂದ ಸಾಮಾನ್ಯ ವಿಐಪಿ ಭೇಟಿಗಿಂತ ಈ ಬಾರಿ ಸಾರ್ವಜನಿಕರ ಸಂಚಾರದ ಮೇಲೆ ಹೆಚ್ಚಿನ ಪರಿಣಾಮ ಬೀರುವ ಸಾಧ್ಯತೆಯಿದೆ. ಶೃಂಗಸಭೆಯ ಸಂಚಾರ ವ್ಯವಸ್ಥೆಗಾಗಿ ಸುಮಾರು 4,800 ಸಂಚಾರ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಮೆಟ್ರೊ, ಬಸ್ ಸೇವೆ ಎಂದಿನಂತೆ ದೆಹಲಿ ಮೆಟ್ರೊ ಸೇವೆ ಮುಂದುವರಿಯಲಿದೆ. ಆದರೆ ಭದ್ರತಾ ಕಾರಣಗಳಿಂದ ಅಗತ್ಯವಿದ್ದಲ್ಲಿ ಕೆಲವು ನಿಲ್ದಾಣಗಳು ಅಥವಾ ಪ್ರವೇಶ?ನಿರ್ಗಮನ ದ್ವಾರಗಳಲ್ಲಿ ತಾತ್ಕಾಲಿಕ ನಿರ್ಬಂಧ ವಿಧಿಸಬಹುದು. ಡಿಟಿಸಿ ಹಾಗೂ ನಗರ ಬಸ್ ಸೇವೆಗಳು ಮುಂದುವರಿಯಲಿದ್ದು, ಬಾಧಿತ ಪ್ರದೇಶಗಳ ಮೂಲಕ ಸಾಗುವ ಮಾರ್ಗಗಳನ್ನು ಬದಲಾಯಿಸುವ, ಮೊಟಕುಗೊಳಿಸುವ ಅಥವಾ ನಿಯಂತ್ರಿಸುವ ಸಾಧ್ಯತೆಯಿದೆ.

ಆಟೋ, ಟ್ಯಾಕ್ಸಿ ಮತ್ತು ಆ್ಯಪ್ ಆಧಾರಿತ ಕ್ಯಾಬ್ ಸೇವೆಗಳು ಸಹ ಮುಂದುವರಿಯಲಿವೆ. ಆದರೆ ನಿರ್ಬಂಧಿತ ಪ್ರದೇಶಗಳಿಗೆ ಅವುಗಳ ಪ್ರವೇಶ ಹಾಗೂ ಪ್ರಯಾಣಿಕರನ್ನು ಹತ್ತಿಸಿಕೊಳ್ಳುವ ಅಥವಾ ಇಳಿಸುವ ವ್ಯವಸ್ಥೆಗಳ ಮೇಲೆ ಪರಿಣಾಮ ಬೀರಬಹುದು. ಪರೀಕ್ಷಾರ್ಥಿಗಳು, ರೋಗಿಗಳಿಗೆ ಸಲಹೆ ಯುಪಿಎಸ್‌ಸಿ, ಎನ್‌ಡಿಎ, ಸಿಡಿಎಸ್ ಸೇರಿದಂತೆ ವಿವಿಧ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಪರೀಕ್ಷಾ ಕೇಂದ್ರ ಮತ್ತು ಮಾರ್ಗವನ್ನು ಮೊದಲೇ ಪರಿಶೀಲಿಸಿಕೊಳ್ಳುವಂತೆ ಪೊಲೀಸರು ಸಲಹೆ ನೀಡಿದ್ದಾರೆ. ಪ್ರವೇಶ ಪತ್ರ ಹಾಗೂ ಗುರುತಿನ ಚೀಟಿ ಕೊಂಡೊಯ್ಯುವುದರ ಜೊತೆಗೆ ಸಾಕಷ್ಟು ಮುಂಚಿತವಾಗಿ ಮನೆಯಿಂದ ಹೊರಡುವಂತೆ ಸೂಚಿಸಲಾಗಿದೆ.


ಆಸ್ಪತ್ರೆಗಳಿಗೆ ನಿಗದಿತ ಭೇಟಿಗಾಗಿ ತೆರಳುವವರು ಹೆಚ್ಚಿನ ಸಮಯವನ್ನು ಮೀಸಲಿಡಬೇಕು ಹಾಗೂ ಪ್ರಯಾಣದ ಮಾರ್ಗವನ್ನು ಮುಂಚಿತವಾಗಿ ಪರಿಶೀಲಿಸಿಕೊಳ್ಳಬೇಕು. ತುರ್ತು ವೈದ್ಯಕೀಯ ಪರಿಸ್ಥಿತಿ ಎದುರಾದರೆ ತಕ್ಷಣವೇ ಸಮೀಪದ ಸಂಚಾರ ಪೊಲೀಸ್ ಸಿಬ್ಬಂದಿಗೆ ಮಾಹಿತಿ ನೀಡುವಂತೆ ಅಧಿಕಾರಿಗಳು ತಿಳಿಸಿದ್ದಾರೆ.

# ರಾಯಚೂರ್ AIMIM ಪಕ್ಷದ ವಾರ್ಡ್ ಪದಾಧಿಕಾರಿಗಳ ನೇಮಕ: ಜನಸೇವೆಗೆ ಆದ್ಯತೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರು ನಗರದ ಎ ಐ ಎಮ್ ಐ ಎಮ್ ಪಕ್ಷದ ಕಚೇರಿಯಲ್ಲಿ ವಾರ್ಡ್ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳನ್ನು ಜನಸೇವೆಯ ಉದ್ದೇಶದಿಂದ ನೇಮಕ ಮಾಡಲಾಗಿದೆ ಎಂದು ಏಐಮ್‌ಐಮ ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷರಾದ ಶಬ್ಬೀರ್ ಅಹ್ಮದ್ ಹೌದೋಡ್ಡಿ ಅವರು ಪತ್ರಕರ್ತರಿಗೆ ತಿಳಿಸಿದರು.

ನಗರದ ವಿವಿಧ ವಾರ್ಡ್‌ಗಳಿಗೆ ಕೆಳಗಿನಂತೆ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ:
- ವಾರ್ಡ್ ನಂ.29ರ ಅಧ್ಯಕ್ಷರು: ಮಾನ್ಯ ಶ್ರೀ ಮೊಹಮ್ಮದ್ ಅಲಿಮ್
- ವಾರ್ಡ್ ನಂ.28ರ ಅಧ್ಯಕ್ಷರು: ಮಾನ್ಯ ಶ್ರೀ ಅಬ್ದುಲ್ ಖಾದಿರ್ ಜಿಲಾನಿ
- ವಾರ್ಡ್ ನಂ.33ರ ಅಧ್ಯಕ್ಷರು: ಮಾನ್ಯ ಶ್ರೀ ಮೊಹಮ್ಮದ್ ಅಜ್ಮತ್
- ವಾರ್ಡ್ ನಂ.29ರ ಪ್ರಧಾನ ಕಾರ್ಯದರ್ಶಿ: ಮಾನ್ಯ ಶ್ರೀ ಅಬ್ದುಲ್ ರಹಿಮಾನ್




ಈ ಸಂದರ್ಭದಲ್ಲಿ ಮಾತನಾಡಿದ ಶಬ್ಬೀರ್ ಅಹ್ಮದ್ ಹೌದೋಡ್ಡಿ ಅವರು, ಮುಂದಿನ ದಿನಗಳಲ್ಲಿ ಜನಸಾಮಾನ್ಯರ ಸೇವೆಯ ಸಂಕಲ್ಪದೊಂದಿಗೆ ಎ ಐ ಎಮ್ ಐ ಮ ಪಕ್ಷದ ಕಾರ್ಯಕರ್ತರ ಪ್ರಯಾಣ ಮುಂದುವರಿಯಲಿದೆ ಎಂದರು.

ರಾಯಚೂರು ನಗರದ ಎಲ್ಲ ಸಮುದಾಯಗಳ ಜನರು ಹಾಗೂ ಸಾರ್ವಜನಿಕರು ಪಕ್ಷಕ್ಕೆ ಮುಂದಿನ ದಿನಗಳಲ್ಲಿ ಸಹಕಾರ, ಬೆಂಬಲ ಮತ್ತು ಆಶೀರ್ವಾದ ನೀಡುತ್ತಾರೆ ಎಂಬ ವಿಶ್ವಾಸವಿದೆ. "ಜನಸೇವೆಯೇ ಜನಾರ್ದನ ಸೇವೆ" ಎಂಬ ಧ್ಯೇಯದೊಂದಿಗೆ ಪಕ್ಷದ ಕಾರ್ಯಕರ್ತರನ್ನು ಒಗ್ಗೂಡಿಸಿಕೊಂಡು ಜನಪರ ಕಾರ್ಯಗಳನ್ನು ಮುಂದುವರಿಸಲಾಗುವುದು ಎಂದು ಅವರು ಹೇಳಿದರು.

ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು, ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಅವರ ಧ್ವನಿಯಾಗಿ ಕಾರ್ಯನಿರ್ವಹಿಸುವುದು ನಮ್ಮ ಪ್ರಮುಖ ಉದ್ದೇಶವಾಗಿದೆ ಎಂದು ಎ ಐ ಎಂಐ ಎಂ ಅಧ್ಯಕ್ಷರಾದ ಶಬ್ಬೀರ್ ಅಹ್ಮದ್ ಹೌದೋಡ್ಡಿ ತಿಳಿಸಿದರು.

# ರಾಷ್ಟ್ರೀಯ ಲೋಕ ಅಧಾಲತ್‌ನ ಪೂರ್ವಭಾವಿ ಸಭೆ

## ರಾಷ್ಟ್ರೀಯ ಲೋಕ ಅದಾಲತ್ ನ ಸದುಪಯೋಗ ಪಡೆದು ಕೊಳ್ಳಿ. ನ್ಯಾ ಉಂಡಿ ಮಂಜುಳಾ ಶಿವಪ್ಪ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು:ತಾಲೂಕು ಕಾನೂನು ಸೇವಾ ಸಮಿತಿ, ಲಿಂಗಸಗೂರು ಲೋಕ ಅಧಾಲತ್ ಅಂಗವಾಗಿ ಪೂರ್ವಭಾವಿ ಸಭೆಯನ್ನು ನ್ಯಾ ಉಂಡಿ ಮಂಜುಳಾ ಶಿವಪ್ಪ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ಹಾಗೂ ಅಧ್ಯಕ್ಷರು ತಾಲೂಕು ಕಾನೂನು ಸೇವಾ ಸಮಿತಿ ರವರ ಅಧ್ಯಕ್ಷತೆಯಲ್ಲಿ ನ್ಯಾಯಾಲಯದ ವಿ ಸಿ ಹಾಲ್ ನಲ್ಲಿ ಆಯೋಜಿಸಲಾಗಿದ್ದು, ದಿನಾಂಕ: 19-09-2026ರಂದು ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸುವ ಇದೊಂದು ಸುವರ್ಣ ಅವಕಾಶವಾಗಿದೆ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯಾರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯದ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣವು




ತೀರ್ಮಾನವಾಗುವುದರಿಂದ ಬಾಂದವ್ಯವು ಉಳಿದು, ವಿವಾದವು ಕೊನೆಗೊಳ್ಳುತ್ತದೆ, ಇಬ್ಬರಿಗೂ ನ್ಯಾಯ ದೊರಕುತ್ತದೆ. ನ್ಯಾಯಾಲಯಕ್ಕೆ ಅಲೆದಾಡುವದು ತಪ್ಪುತ್ತದೆ ಹಾಗೂ ಸಮಯ ಹಣ ಉಳಿತಾಯ - ವಾಗುತ್ತದೆ. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ. ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು ಬ್ಯಾಂಕ್ ವಸೂಲಾತಿ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ರಾಜೀಯಾಗಬಲ್ಲ ಸಿವಿಲ್ ಪ್ರಕರಣಗಳು, ಕೌಟುಂಬಿಕ ಮತ್ತು ಇತರೆ ಪ್ರಕರಣಗಳು ಲೋಕ ಅಧಾಲತ್ತಿನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಅಂಬಣ್ಣ ಕೆ. ಮತ್ತು ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಸಿದ್ರಾಮ ರೆಡ್ಡಿ, ಮತ್ತು ವಕೀಲರ ಸಂಘದ ಪದಾದಿಕಾರಿಗಳು, ತಾಲ್ಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂಧಿಗಳು ಹಾಜರಿದ್ದರು .

# ಪೋಷಣಾ ಮಾಸಾಚರಣೆ-2026: ಆರೋಗ್ಯಕರ ಜೀವನಕ್ಕೆ ಪೌಷ್ಟಿಕ ಆಹಾರ ಅತ್ಯಗತ್ಯ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರು ಸಂಯುಕ್ತ ಆಶ್ರಯದಲ್ಲಿ ಪೋಷಣಾ ಮಾಸಾಚರಣೆ-2026ರ ಅಂಗವಾಗಿ ಸಾರ್ವಜನಿಕರಲ್ಲಿ ಪೌಷ್ಟಿಕ ಆಹಾರದ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರವನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಆರೋಗ್ಯ ಇಲಾಖೆ ವತಿಯಿಂದ ಪುನರ್ವಸತಿ ಅಂಗನವಾಡಿ ಕೇಂದ್ರದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು

ಈ ಕುರಿತು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ ಅವರು ಮಾತನಾಡಿ, ಉತ್ತಮ ಆರೋಗ್ಯಕ್ಕೆ ಪೌಷ್ಟಿಕ ಆಹಾರವೇ ಮೂಲಾಧಾರವಾಗಿದೆ ಎಂದು ತಿಳಿಸಿದರು.




ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ಕಿಶೋರಿಯರು ಸಮತೋಲನಯುತ ಮತ್ತು ಪೌಷ್ಟಿಕ ಆಹಾರ ಸೇವಿಸುವುದರಿಂದ ಅಪೌಷ್ಟಿಕತೆ, ರಕ್ತಹೀನತೆ ಹಾಗೂ ಇತರೆ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಬಹುದು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪೋಷಣಾ ಅಭಿಯಾನದ ಸಂಯೋಜಕರಾದ ಮುತ್ತಣ್ಣ ಅವರು ಮಾತನಾಡಿ ಗರ್ಭಿಣಿಯರು ಕಬ್ಬಿಣಾಂಶ, ಪ್ರೋಟೀನ್, ಕ್ಯಾಲ್ಸಿಯಂ ಹಾಗೂ ವಿಟಮಿನ್‌ಗಳಿರುವ ಆಹಾರವನ್ನು ನಿಯಮಿತವಾಗಿ ಸೇವಿಸಬೇಕು. ಬಾಣಂತಿಯರು ಮಗುವಿಗೆ ಜನನದ ಒಂದು ಗಂಟೆಯೊಳಗೆ ತಾಯಿಹಾಲುಣಿಸಲು ಪ್ರಾರಂಭಿಸಬೇಕು ಹಾಗೂ ಮೊದಲ ಆರು ತಿಂಗಳು ಕೇವಲ ತಾಯಿಹಾಲನ್ನೇ ನೀಡಬೇಕು ಎಂದು ಸಲಹೆ ನೀಡಿದರು. ಆರು ತಿಂಗಳ ನಂತರ ತಾಯಿಹಾಲಿನ ಜೊತೆಗೆ ಪೂರಕ ಪೌಷ್ಟಿಕ ಆಹಾರವನ್ನು ಮಗುವಿಗೆ ನೀಡಬೇಕು ಅಂಗನವಾಡಿ ಕೇಂದ್ರದಲ್ಲಿ ಸಿಗುವ ಪೌಷ್ಟಿಕ ಆಹಾರವನ್ನು ತಪ್ಪದೇ ತಮ್ಮ ಮಕ್ಕಳಿಗೆ ನೀಡಬೇಕು ಎಂದು ತಿಳಿಸಿದರು.

ನಂತರ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕರಾದ ಸುನೀತಾ ಸಜ್ಜನ್ ಅವರ ಮಾತನಾಡಿದರು ತಾಯಿಂದಿರು ತಮ್ಮ ದಿನನಿತ್ಯದ ಆಹಾರದಲ್ಲಿ ಹಸಿರು ಸೊಪ್ಪುಗಳು, ತರಕಾರಿಗಳು, ಹಣ್ಣುಗಳು, ಬೇಳೆಕಾಳುಗಳು, ಮೊಟ್ಟೆ, ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಸೇರಿಸಿಕೊಳ್ಳಬೇಕು. ಅತಿಯಾದ ಎಣ್ಣೆ, ಸಕ್ಕರೆ ಹಾಗೂ ಉಪ್ಪಿನ ಬಳಕೆಯನ್ನು ಕಡಿಮೆ ಮಾಡಿ ಆರೋಗ್ಯಕರ ಆಹಾರ ಪದ್ಧತಿಯನ್ನು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು. ಶುದ್ಧ ಕುಡಿಯುವ ನೀರು, ವೈಯಕ್ತಿಕ ಸ್ವಚ್ಛತೆ ಹಾಗೂ ನಿಯಮಿತ ಆರೋಗ್ಯ ತಪಾಸಣೆಗಳು ಉತ್ತಮ ಪೌಷ್ಟಿಕ ಸ್ಥಿತಿಯನ್ನು ಕಾಪಾಡಲು ಸಹಕಾರಿಯಾಗುತ್ತವೆ. ಅಪೌಷ್ಟಿಕತೆ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಪೌಷ್ಟಿಕ ಆಹಾರದ ಬಗ್ಗೆ ಅರಿವು ಹೊಂದಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ.ಅಂಗನವಾಡಿ ಕಾರ್ಯಕರ್ತೆಯರಾದ ಆದಿಲಕ್ಷ್ಮೀ. ಬಸವಂತಮ್ಮ.ವಿಜಯಮ್ಮ. ಹಾಗೂ ಆಶಾ ಕಾರ್ಯಕರ್ತೆ ಲಕ್ಷ್ಮಿ ಹಾಗೂ ತಾಯಿ ಕದಿರು ಸಾರ್ವಜನಿಕರು ಉಪಸ್ಥಿತರಿದ್ದರು ಮಾಧ್ಯಮಗಳ ಪ್ರಕಟಣೆಗಾಗಿ ಮಾನ್ಯ ಮಾಧ್ಯಮ ಸ್ನೇಹಿತರಲ್ಲಿ ವಿನಂತಿ ಮಾಡಿಕೊಳ್ಳುತ್ತೇವೆ ಸರ್ ಬಾಲಪ್ಪ ನಾಯಕ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ

## ನೇಮಕಾತಿ ಪ್ರಕಟಣೆ

**KFD ನೇಮಕಾತಿ 2026 – 750 ಅರಣ್ಯ ವೀಕ್ಷಕ (Forest Observer) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 8, 2026**

**KFD ನೇಮಕಾತಿ 2026: 750 ಅರಣ್ಯ ವೀಕ್ಷಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅರಣ್ಯ ಇಲಾಖೆಯು ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ ಅರಣ್ಯ ವೀಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07 ಸೆಪ್ಟೆಂಬರ್ 2026 ರೊಳಗೆ (ಅಂತಿಮ ದಿನಾಂಕವನ್ನು 30–09–2026 ರವರೆಗೆ ವಿಸ್ತರಿಸಲಾಗಿದೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aranya.gov.in**

## ಸಚಿವ ಡಾ. ಯತೀಂದ್ರ ಭೇಟಿಯಾದ ವಿನಯ್ ಕುಲಕರ್ಣಿ: ಧಾರವಾಡಕ್ಕೆ ವಿಶೇಷ ಅನುದಾನಕ್ಕೆ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

**ತಾಂಡವಪರ ಸೆಪ್ಟೆಂಬರ್ 11 ಧಾರವಾಡ ಶಾಸಕರಾದ ವಿನಯ್ ಕುಲಕರ್ಣಿ ಅವರು ಇಂದು ಗೃಹ ಕಚೇರಿಯಲ್ಲಿ ಭೇಟಿಯಾಗಿ, ಧಾರವಾಡ ಕ್ಷೇತ್ರದಲ್ಲಿ ನಗರಾಭಿವೃದ್ಧಿ ಇಲಾಖೆಯ ವತಿಯಿಂದ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕು- ರಿತು ಸಚಿವರಾದ ಡಾ. ಎಸ್ ಯತೀಂದ್ರ ಸಿದ್ರಾಮಯ್ಯನವರು ಶಾಸಕ ವಿನಯ ಕುಲಕರ್ಣಿ ರವರು ಸುದೀರ್ಘ ಚರ್ಚೆ ನಡೆಸಿದರು**



ಧಾರವಾಡ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಕಾಮಗಾರಿಗಳಿಗೆ ನಗರಾಭಿವೃದ್ಧಿ ಇಲಾಖೆಯಿಂದ ಆದ್ಯತೆ ನೀಡಿ, ಅವುಗಳನ್ನು ಶೀಘ್ರಗತಿಯಲ್ಲಿ ಅನುಷ್ಠಾನಗೊಳಿಸುವ ಕುರಿತು ಈ ಸಂದರ್ಭದಲ್ಲಿ ಚರ್ಚೆ ಮಾಡಿ ಸಮಾಲೋಚನೆ ಮಾಡಿ ಸಚಿವರು ಶಾಸಕರು ಚರ್ಚೆ ನಡೆಸಿದರು ಈ ಸಂದರ್ಭದಲ್ಲಿ ಧಾರವಾಡ ವಿಧಾನಸಭಾ ಕ್ಷೇತ್ರದ ಮುಖಂಡರು ಶಾಸಕ ವಿನಯ್ ಕುಲಕರ್ಣಿ ರವರು ಹಾಗೂ ಮುಂತಾದವರು ಹಾಜರಿದ್ದರು

## ಕಂಪ್ಲಿ ವ್ಯಾಪ್ತಿಯ ಎರಡು ಗ್ರಾಮಗಳಲ್ಲಿ ಸಾರ್ವಜನಿಕ ಗಣೇಶೋತ್ಸವಕ್ಕೆ ನಿಷೇಧ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ : ಪ್ರಸಕ್ತ ವರ್ಷದ ಗಣೇಶ ಹಬ್ಬದ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಬಳ್ಳಾರಿ ಜಿಲ್ಲೆಯ ಕಂಪ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ಎರಡು ಸೂಕ್ಷ್ಮ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪಿಸುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶ ಹೊರಡಿಸಿದ್ದಾರೆ.**



ಕಂಪ್ಲಿ ಪೊಲೀಸ್ ಠಾಣಾ ಸರಹದ್ದಿನ ನಂ.15 ಗೋನಾಳ ಹಾಗೂ ನಂ.10 ಮುದ್ದಾಪುರ ಗ್ರಾಮಗಳಲ್ಲಿ ಈ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಈ ಗ್ರಾಮಗಳಲ್ಲಿ ಪ್ರಕ್ಷುಬ್ಧ ವಾತಾವರಣವಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಗಣೇಶೋತ್ಸವ ಆಚರಣೆಗೆ ಅವಕಾಶ ನೀಡಿದರೆ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ವರದಿ ಸಲ್ಲಿಸಿದ್ದರು. ಪೊಲೀಸ್ ಇಲಾಖೆಯ ಮನವಿಯ ಮೇರೆಗೆ ಹಾಗೂ ಮುಂಜಾಗ್ರತಾ ಕ್ರಮವಾಗಿ ಕರ್ನಾಟಕ ಪೊಲೀಸ್ ಕಾಯ್ದೆ-1963ರ ಕಲಂ 35ರ ಅಡಿಯಲ್ಲಿ ಜಿಲ್ಲಾಧಿಕಾರಿಗಳು ತಮ್ಮ ಅಧಿಕಾರ ಚಲಾಯಿಸಿ ಈ ಆದೇಶ ಹೊರಡಿಸಿದ್ದಾರೆ. ಆದೇಶದ ಪ್ರಕಾರ, ಮೇಲ್ಕಂಡ ಗ್ರಾಮಗಳ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಲ್ಲದೆ, ಹಬ್ಬದ ನೆಪದಲ್ಲಿ ಯಾವುದೇ ರೀತಿಯ ಸಾರ್ವಜನಿಕ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸುವುದಕ್ಕೂ ಅವಕಾಶ ಇರುವುದಿಲ್ಲ. ನಿಷೇಧಿತ ಪ್ರದೇಶಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅನಗತ್ಯವಾಗಿ ಜನಸಂದಣಿ ಸೇರುವುದನ್ನು ಸಹ ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳ ಆದೇಶದಲ್ಲಿ ತಿಳಿಸಲಾಗಿದೆ.

# ಸಿರವಾರ, ಮಾನ್ವಿ, ಸಿಂಧನೂರು ತಾಲೂಕುಗಳನ್ನು ಬರದ ಪಟ್ಟಿಗೆ ಸೇರಿಸಿ: ರೈತ ಸಂಘ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಸಿರವಾರ, ಮಾನ್ವಿ ಹಾಗೂ ಸಿಂಧನೂರು ತಾಲೂಕುಗಳನ್ನು ತಕ್ಷಣ ಅಧಿಕೃತ ಬರದ ಪಟ್ಟಿಗೆ ಸೇರ್ಪಡೆ ಮಾಡಬೇಕು ಹಾಗೂ ರಾಯಚೂರು ಜಿಲ್ಲೆಯ ಎಂಟು ತಾಲೂಕುಗಳಲ್ಲೂ ತೀವ್ರ ಬರ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರೈತ ಸಂಘ (ಂಋಗಏಖ) ರಾಷ್ಟ್ರೀಯ ಉಪಾಧ್ಯಕ್ಷ ಡಿ.ಹೆಚ್. ಪೂಜಾರ್ ತಿಳಿಸಿದರು.**



ಮಾನ್ವಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿರವಾರ, ಮಾನ್ವಿ ಹಾಗೂ ಸಿಂಧನೂರು ತಾಲೂಕುಗಳನ್ನು ಬರದ ಪಟ್ಟಿಯಿಂದ ಹೊರಗಿಟ್ಟಿರುವುದು ಈ ಭಾಗದ ಜನರಿಗೆ ಸರ್ಕಾರ ಮಾಡಿರುವ ಅನ್ಯಾಯವಾಗಿದೆ. ಈ ಮೂರು ತಾಲೂಕುಗಳನ್ನು ಬರದ ಪಟ್ಟಿಗೆ ಸೇರಿಸಲಾಗಿದೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿದ್ದರೂ, ಸಂಬಂಧಿಸಿದ ತಹಶೀಲ್ದಾರರನ್ನು ಸಂಪರ್ಕಿಸಿದಾಗ ಯಾವುದೇ ಅಧಿಕೃತ ಆದೇಶ ಬಂದಿಲ್ಲ ಎಂಬುದು ತಿಳಿದುಬಂದಿದೆ. ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ದೊರೆಯುತ್ತಿಲ್ಲ ಎಂದು ಆರೋಪಿಸಿದರು. ಜಿಲ್ಲಾಧ್ಯಕ್ಷ ಅಶೋಕ ನೀಲಗಲ್ ಮಾತನಾಡಿ, ರಾಯಚೂರು ಜಿಲ್ಲೆಯ ಎಂಟು ತಾಲೂಕುಗಳಲ್ಲಿ ಸರಾಸರಿ ಶೇ.80ರಷ್ಟು ಮಳೆ ಕೊರತೆಯಾಗಿದ್ದು, ಕೃಷ್ಣಾ ಹಾಗೂ ತುಂಗಭದ್ರಾ ಜಲಾಶಯಗಳ ನೀರು ಜಿಲ್ಲೆಯ ಕೇವಲ ಶೇ.10ರಷ್ಟು ಜಮೀನುಗಳಿಗೆ ಮಾತ್ರ ತಲುಪುತ್ತಿದೆ.

ಮಳೆಯ ತೀವ್ರ ಕೊರತೆಯಿಂದ ಶೇ.90ರಷ್ಟು ಭೂಮಿ ಪಾಳು ಬಿದ್ದಿದ್ದು, ಮೇ ತಿಂಗಳಲ್ಲಿ ಅಲ್ಪಸ್ವಲ್ಪ ಮಳೆಗೆ ಬಿತ್ತನೆ ಮಾಡಿದ್ದ ಬೆಳೆಗಳು ನೀರಿಲ್ಲದೆ ಒಣಗಿ ಹೋಗಿವೆ ಎಂದರು. ಕಂದಾಯ ಹಾಗೂ ಕೃಷಿ ಇಲಾಖೆಯ ಅಧಿಕಾ- ರಿಗಳು ರೈತರ ಜಮೀನುಗಳಿಗೆ ತೆರಳಿ ವಾಸ್ತವ ಪರಿಸ್ಥಿತಿ ಪರಿಶೀಲಿಸದೆ ಕಚೇರಿಗಳಲ್ಲೇ ಕುಳಿತು ಕಾಟಾಚಾರದ ವರದಿ ಸಲ್ಲಿಸುತ್ತಿರುವುದರಿಂದ ರೈತರು ಪರಿಹಾರದಿಂದ ವಂಚಿತರಾಗುತ್ತಿದ್ದಾರೆ ಎಂದು ಅಶೋಕ ನೀಲಗಲ್ ಆರೋಪಿಸಿದರು. ಕೇಂದ್ರ ಸರ್ಕಾರದ ಬರ ಘೋಷಣೆಯ ಮಾನದಂಡಗಳು ಅವೈಜ್ಞಾನಿಕವಾಗಿದ್ದು, ರೈತರ ಹಿತಾಸಕ್ತಿಗೆ ಮಾರಕವಾಗಿವೆ. 2009ರ ಬರ ನಿರ್ವಹಣಾ ಕೈಪಿಡಿಗೆ 2016 ಮತ್ತು 2022ರಲ್ಲಿ ಮಾಡಲಾದ ತಿದ್ದುಪಡಿಗಳಿಂದ ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲಿ ಬರ ಪರಿಸ್ಥಿತಿಯನ್ನು ಗುರುತಿಸಿ ಪರಿಹಾರ ನೀಡುವ ಅವಕಾಶವನ್ನು ಕಡಿತಗೊಳಿಸಲಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬರ ಪರಿಹಾರದ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಇಂತಹ ಮಾನದಂಡಗಳನ್ನು ಬಳಸುತ್ತಿವೆ ಎಂದು ಅವರು ದೂರಿದರು. ರಾಯಚೂರು ಜಿಲ್ಲೆಯ ಪ್ರತಿಯೊಂದು ತಾಲೂಕಿಗೂ ತಲಾ ?100 ಕೋಟಿ ಬರ ಪರಿಹಾರ ನೀಡಬೇಕು. ಬೆಳೆ ನಷ್ಟ ಅನುಭವಿಸಿದ ರೈತರಿಗೆ ಒಣಭೂಮಿಗೆ ಎಕರೆಗೆ ?30 ಸಾವಿರ ಹಾಗೂ ನೀರಾವರಿ ಭೂಮಿಗೆ ಎಕರೆಗೆ ?50 ಸಾವಿರ ಪರಿಹಾರ ನೀಡಬೇಕು. ರೈತರ ಸಂಪೂರ್ಣ ಬೆಳೆ ಸಾಲ ಹಾಗೂ ಮೈಕ್ರೋ ಫೈನಾನ್ಸ್ ಸಾಲ ಮನ್ನಾ ಮಾಡಬೇಕು. ಬಡವರು ಮತ್ತು ಕೂಲಿ ಕಾರ್ಮಿಕರಿಗೆ ವರ್ಷಪೂರ್ತಿ ಉಚಿತ ಆಹಾರ ಧಾನ್ಯ ವಿತರಿಸಬೇಕು ಹಾಗೂ ಉದ್ಯೋಗ ಖಾತ್ರಿ ಯೋಜನೆಯಡಿ ವರ್ಷಪೂರ್ತಿ ಕೆಲಸ ಒದಗಿಸಬೇಕು ಎಂದು ಆಗ್ರಹಿಸಿದರು.

ಅಂತೆಯೇ, ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಪ್ರತಿಯೊಂದು ಗ್ರಾಮ ಹಾಗೂ ಪಟ್ಟಣ-ಕ್ಕೆ ಸಮರ್ಪಕ ಶುದ್ಧ ಕುಡಿಯುವ ನೀರು ಪೂರೈಸಬೇಕು. ಕೆಟ್ಟುಹೋಗಿರುವ ಖಔ ಘಟಕಗಳನ್ನು ತಕ್ಷಣ ದುರಸ್ತಿ ಮಾಡಿ, ಅಂತರ್ಜಲ ಬತ್ತಿರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ಗೋಶಾಲೆಗಳ ಬದಲಿಗೆ ರೈತರ ಮನೆ ಮನೆಗೆ ಉಚಿತ ಮೇವು ವಿತರಿಸಬೇಕು. ಬರದ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ರೈತ ಸಂಘ ಒತ್ತಾಯಿಸಿದೆ. ಸರ್ಕಾರ ಕೂಡಲೇ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ, ಸಿರವಾರ, ಮಾನ್ವಿ ಮತ್ತು ಸಿಂಧನೂರು ತಾಲೂಕುಗಳನ್ನು ಅಧಿಕೃತ ಬರದ ಪಟ್ಟಿಗೆ ಸೇರಿಸುವುದರ ಜೊತೆಗೆ ಜಿಲ್ಲೆಯಾದ್ಯಂತ ತುರ್ತು ಬರ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಸಿರವಾರ, ಮಾನ್ವಿ,

ಸಿಂಧನೂರು ತಾಲೂಕುಗಳನ್ನು ಬರದ ಪಟ್ಟಿಗೆ ಸೇರಿಸಿ: ರೈತ ಸಂಘ ಆಗ್ರಹ
ಮಾನ್ವಿ : ಸಿರವಾರ, ಮಾನ್ವಿ ಹಾಗೂ ಸಿಂಧನೂರು ತಾಲೂಕುಗಳನ್ನು ತಕ್ಷಣ ಅಧಿಕೃತ ಬರದ ಪಟ್ಟಿಗೆ ಸೇರ್ಪಡೆ ಮಾಡಬೇಕು ಹಾಗೂ ರಾಯಚೂರು ಜಿಲ್ಲೆಯ ಎಂಟು ತಾಲೂಕುಗಳಲ್ಲೂ ತೀವ್ರ ಬರ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರೈತ ಸಂಘ (AIUKS) ರಾಷ್ಟ್ರೀಯ ಉಪಾಧ್ಯಕ್ಷ ಡಿ.ಹೆಚ್. ಪೂಜಾರ್ ತಿಳಿಸಿದರು.

ಮಾನ್ವಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿರವಾರ, ಮಾನ್ವಿ ಹಾಗೂ ಸಿಂಧನೂರು ತಾಲೂಕುಗಳನ್ನು ಬರದ ಪಟ್ಟಿಯಿಂದ ಹೊರಗಿಟ್ಟಿರುವುದು ಈ ಭಾಗದ ಜನರಿಗೆ ಸರ್ಕಾರ ಮಾಡಿರುವ ಅನ್ಯಾಯವಾಗಿದೆ. ಈ ಮೂರು ತಾಲೂಕುಗಳನ್ನು ಬರದ ಪಟ್ಟಿಗೆ ಸೇರಿಸಲಾಗಿದೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿದ್ದರೂ, ಸಂಬಂಧಿಸಿದ ತಹಶೀಲ್ದಾರರನ್ನು ಸಂಪರ್ಕಿಸಿದಾಗ ಯಾವುದೇ ಅಧಿಕೃತ ಆದೇಶ ಬಂದಿಲ್ಲ ಎಂಬುದು ತಿಳಿದುಬಂದಿದೆ. ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ದೊರೆಯುತ್ತಿಲ್ಲ ಎಂದು ಆರೋಪಿಸಿದರು. ಜಿಲ್ಲಾಧ್ಯಕ್ಷ ಅಶೋಕ ನೀಲಗಲ್ ಮಾತನಾಡಿ, ರಾಯಚೂರು ಜಿಲ್ಲೆಯ ಎಂಟು ತಾಲೂಕುಗಳಲ್ಲಿ ಸರಾಸರಿ ಶೇ.80ರಷ್ಟು ಮಳೆ ಕೊರತೆಯಾಗಿದ್ದು, ಕೃಷ್ಣಾ ಹಾಗೂ ತುಂಗಭದ್ರಾ ಜಲಾಶಯಗಳ ನೀರು ಜಿಲ್ಲೆಯ ಕೇವಲ ಶೇ.10ರಷ್ಟು ಜಮೀನುಗಳಿಗೆ ಮಾತ್ರ ತಲುಪುತ್ತಿದೆ.

ಮಳೆಯ ತೀವ್ರ ಕೊರತೆಯಿಂದ ಶೇ.90ರಷ್ಟು ಭೂಮಿ ಪಾಳು ಬಿದ್ದಿದ್ದು, ಮೇ ತಿಂಗಳಲ್ಲಿ ಅಲ್ಪಸ್ವಲ್ಪ ಮಳೆಗೆ ಬಿತ್ತನೆ ಮಾಡಿದ್ದ ಬೆಳೆಗಳು ನೀರಿಲ್ಲದೆ ಒಣಗಿ ಹೋಗಿವೆ ಎಂದರು. ಕಂದಾಯ ಹಾಗೂ ಕೃಷಿ ಇಲಾಖೆಯ ಅಧಿಕಾ- ರಿಗಳು ರೈತರ ಜಮೀನುಗಳಿಗೆ ತೆರಳಿ ವಾಸ್ತವ ಪರಿಸ್ಥಿತಿ ಪರಿಶೀಲಿಸದೆ ಕಚೇರಿಗಳಲ್ಲೇ ಕುಳಿತು ಕಾಟಾಚಾರದ ವರದಿ ಸಲ್ಲಿಸುತ್ತಿರುವುದರಿಂದ ರೈತರು ಪರಿಹಾರದಿಂದ ವಂಚಿತರಾಗುತ್ತಿದ್ದಾರೆ ಎಂದು ಅಶೋಕ ನೀಲಗಲ್ ಆರೋಪಿಸಿದರು. ಕೇಂದ್ರ ಸರ್ಕಾರದ ಬರ ಘೋಷಣೆಯ ಮಾನದಂಡಗಳು ಅವೈಜ್ಞಾನಿಕವಾಗಿದ್ದು, ರೈತರ ಹಿತಾಸಕ್ತಿಗೆ ಮಾರಕವಾಗಿವೆ. 2009ರ ಬರ ನಿರ್ವಹಣಾ ಕೈಪಿಡಿಗೆ 2016 ಮತ್ತು 2022ರಲ್ಲಿ ಮಾಡಲಾದ ತಿದ್ದುಪಡಿಗಳಿಂದ ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲಿ ಬರ ಪರಿಸ್ಥಿತಿಯನ್ನು ಗುರುತಿಸಿ ಪರಿಹಾರ ನೀಡುವ ಅವಕಾಶವನ್ನು ಕಡಿತಗೊಳಿಸಲಾಗಿದೆ.


ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬರ ಪರಿಹಾರದ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಇಂತಹ ಮಾನದಂಡಗಳನ್ನು ಬಳಸುತ್ತಿವೆ ಎಂದು ಅವರು ದೂರಿದರು. ರಾಯಚೂರು ಜಿಲ್ಲೆಯ ಪ್ರತಿಯೊಂದು ತಾಲೂಕಿಗೂ ತಲಾ ?100 ಕೋಟಿ ಬರ ಪರಿಹಾರ ನೀಡಬೇಕು. ಬೆಳೆ ನಷ್ಟ ಅನುಭವಿಸಿದ ರೈತರಿಗೆ ಒಣಭೂಮಿಗೆ ಎಕರೆಗೆ ?30 ಸಾವಿರ ಹಾಗೂ ನೀರಾವರಿ ಭೂಮಿಗೆ ಎಕರೆಗೆ ?50 ಸಾವಿರ ಪರಿಹಾರ ನೀಡಬೇಕು. ರೈತರ ಸಂಪೂರ್ಣ ಬೆಳೆ ಸಾಲ ಹಾಗೂ ಮೈಕ್ರೋ ಫೈನಾನ್ಸ್ ಸಾಲ ಮನ್ನಾ ಮಾಡಬೇಕು. ಬಡವರು ಮತ್ತು ಕೂಲಿ ಕಾರ್ಮಿಕರಿಗೆ ವರ್ಷಪೂರ್ತಿ ಉಚಿತ ಆಹಾರ ಧಾನ್ಯ ವಿತರಿಸಬೇಕು ಹಾಗೂ ಉದ್ಯೋಗ ಖಾತ್ರಿ ಯೋಜನೆಯಡಿ ವರ್ಷಪೂರ್ತಿ ಕೆಲಸ ಒದಗಿಸಬೇಕು ಎಂದು ಆಗ್ರಹಿಸಿದರು. ಅಂತೆಯೇ, ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಪ್ರತಿಯೊಂದು ಗ್ರಾಮ ಹಾಗೂ ಪಟ್ಟಣ-ಕ್ಕೆ ಸಮರ್ಪಕ ಶುದ್ಧ ಕುಡಿಯುವ ನೀರು ಪೂರೈಸಬೇಕು. ಕೆಟ್ಟುಹೋಗಿರುವ ಖಔ ಘಟಕಗಳನ್ನು ತಕ್ಷಣ ದುರಸ್ತಿ ಮಾಡಿ, ಅಂತರ್ಜಲ ಬತ್ತಿರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ಗೋಶಾಲೆಗಳ ಬದಲಿಗೆ ರೈತರ ಮನೆ ಮನೆಗೆ ಉಚಿತ ಮೇವು ವಿತರಿಸಬೇಕು. ಬರದ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂದು ರೈತ ಸಂಘ ಒತ್ತಾಯಿಸಿದೆ. ಸರ್ಕಾರ ಕೂಡಲೇ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ, ಸಿರವಾರ, ಮಾನ್ವಿ ಮತ್ತು ಸಿಂಧನೂರು ತಾಲೂಕುಗಳನ್ನು ಅಧಿಕೃತ ಬರದ ಪಟ್ಟಿಗೆ ಸೇರಿಸುವುದರ ಜೊತೆಗೆ ಜಿಲ್ಲೆಯಾದ್ಯಂತ ತುರ್ತು ಬರ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

# ಇಂದು ಸಿಂಧನೂರಿನಲ್ಲಿ 'ಕ್ರಾಂತಿಯ ಜ್ಯೋತಿ?ಪ್ರವಾದಿ ಮುಹಮ್ಮದ್ (ಸ)' ರಾಜ್ಯವ್ಯಾಪಿ ಸೀರತ್ ಅಭಿಯಾನ – ವಿಚಾರಗೋಷ್ಠಿ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಮಾನವಕುಲಕ್ಕೆ ಶಾಂತಿ, ನ್ಯಾಯ, ಸಮಾನತೆ, ಸಹೋದರತ್ವ ಹಾಗೂ ಮಾನವೀಯತೆಯ ಮೌಲ್ಯಗಳನ್ನು ಸಾರಿದ ಪ್ರವಾದಿ ಮುಹಮ್ಮದ್ (ಸ) ಅವರ ಆದ-'ರ್ಶ ಜೀವನ, ಸಂದೇಶ ಮತ್ತು ಮೌಲ್ಯಗಳನ್ನು ಸಮಾಜಕ್ಕೆ ಪರಿಚಯಿಸುವ ಉದ್ದೇಶದಿಂದ 'ಕ್ರಾಂತಿಯ ಜ್ಯೋತಿ?ಪ್ರವಾದಿ ಮುಹಮ್ಮದ್ (ಸ)' ರಾಜ್ಯವ್ಯಾಪಿ ಸೀರತ್ ಅಭಿಯಾನ?2026ರ ಅಂಗವಾಗಿ ಸಿಂಧನೂರಿನಲ್ಲಿ ವಿಶೇಷ ವಿಚಾರಗೋಷ್ಠಿ ಆಯೋಜಿಸಲಾಗಿದೆ.**

ಸೆಪ್ಟೆಂಬರ್ 12ರಂದು ಶನಿವಾರ ಸಂಜೆ 7.15 ಗಂಟೆಗೆ ಸಿಂಧನೂರು ನಗರದ ಕೋಟೆ ಪ್ರದೇಶದಲ್ಲಿರುವ ಮಿಲಾಫ್ ಶಾದಿ ಮಹಲ್‌ನಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಸೀರತ್ ಸ್ವಾಗತ ಸಮಿತಿ ತಿಳಿಸಿದೆ. ಪ್ರವಾದಿ ಮುಹಮ್ಮದ್ (ಸ) ಅವರ ಜೀವನವು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿರದೆ, ಇಡೀ ಮಾನವಕುಲಕ್ಕೆ ಶಾಂತಿ, ಸೌಹಾರ್ದತೆ, ನ್ಯಾಯ, ಸಮಾನತೆ, ಸಹೋದರತ್ವ ಹಾಗೂ ಮಾನವೀಯತೆಯ ಮಹತ್ವವನ್ನು ಸಾರುವ ಆದರ್ಶವಾಗಿದೆ. ಅವರ ಜೀವನದ ಮೌಲ್ಯಗಳು ಇಂದಿನ




ಸಮಾಜದಲ್ಲಿಯೂ ಅತ್ಯಂತ ಪ್ರಸ್ತುತವಾಗಿದ್ದು, ಯುವಜನತೆ ಸೇರಿದಂತೆ ಪ್ರತಿಯೊಬ್ಬರೂ ಅವುಗಳನ್ನು ಅರಿತುಕೊಳ್ಳುವ ಅಗತ್ಯವಿದೆ. ಇದೇ ಆಶಯದೊಂದಿಗೆ ರಾಜ್ಯವ್ಯಾಪಿಯಾಗಿ ಸೀರತ್ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಸಮಾಜದಲ್ಲಿಶಾಂತಿ?ಸೌಹಾರ್ದತೆಗೆ ಸೀರತ್ ಸಂದೇಶ ಇಂದಿನ ಸಂದರ್ಭದಲ್ಲಿ ಸಮಾಜದಲ್ಲಿ ಪರಸ್ಪರ ಗೌರವ, ಸಹಬಾಳ್ವೆ, ಸಹೋದರತ್ವ ಹಾಗೂ ಮಾನವೀಯ ಮೌಲ್ಯಗಳನ್ನು ಬಲಪಡಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಮತ್ತು ಸಂದೇಶಗಳ ಕುರಿತು ವಿಚಾರಗೋಷ್ಠಿಯಲ್ಲಿ ಚಿಂತನೆ ನಡೆಯಲಿದೆ. ಸಮಾಜದ ವಿವಿಧ ಕ್ಷೇತ್ರಗಳ ಗಣ್ಯರು, ಚಿಂತಕರು, ಹಿರಿಯರು ಹಾಗೂ ಸಾರ್ವಜನಿಕರು ಭಾಗವಹಿಸಿ ತಮ್ಮ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ. ವಿಶೇಷವಾಗಿ ಯುವಜನತೆ ಪ್ರವಾದಿ ಮುಹಮ್ಮದ್ (ಸ) ಅವರ ಸರಳತೆ, ಸತ್ಯನಿಷ್ಠೆ, ನ್ಯಾಯಪರತೆ, ಸಹನೆ, ಕರುಣೆ ಹಾಗೂ ಮಾನವೀಯತೆಯಂತಹ ಗುಣಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ಸಾರಲಾಗುತ್ತದೆ.

ಸರ್ವ ಸಮುದಾಯದವ-ರಿಗೂ ಮುಕ್ತ ಆಹ್ವಾನ ಈ ವಿಚಾರಗೋಷ್ಠಿಯು ಸರ್ವ ಸಮುದಾಯದ ಬಾಂಧವರು ಭಾಗವಹಿಸಿ ಪ್ರವಾದಿ ಮುಹಮ್ಮದ್ (ಸ) ಅವರ ಜೀವನ ಮತ್ತು ಮಾನವೀಯ ಸಂದೇಶವನ್ನು ತಿಳಿದುಕೊಳ್ಳುವಂತಹ ಚಿಂತನಾ ವೇದಿಕೆಯಾಗಿದೆ. ಆದ್ದರಿಂದ ಸಿಂಧನೂರು ನಗರದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸರ್ವ ಸಮುದಾಯದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸೀರತ್ ಸ್ವಾಗತ ಸಮಿತಿ ಮನವಿ ಮಾಡಿದೆ. ಶಾಂತಿ, ಸಹಬಾಳ್ವೆ, ಸಹೋದರತ್ವ ಮತ್ತು ಮಾನವೀಯತೆಯ ಸಂದೇಶವನ್ನು ಸಮಾಜದಲ್ಲಿ ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿರುವ ಈ ವಿಚಾರಗೋಷ್ಠಿಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಉಪಸ್ಥಿತಿಯ ಮೂಲಕ ಕಾರ್ಯಕ್ರಮಕ್ಕೆ ಬೆಂಬಲ ನೀಡಬೇಕು ಎಂದು ಆಯೋಜಕರು ಕೋರಿದ್ದಾರೆ.

ಕಾರ್ಯಕ್ರಮ: 'ಕ್ರಾಂತಿಯ ಜ್ಯೋತಿ?ಪ್ರವಾದಿ ಮುಹಮ್ಮದ್ (ಸ)' ರಾಜ್ಯವ್ಯಾಪಿ ಸೀರತ್ ಅಭಿಯಾನ?2026
ಕಾರ್ಯಕ್ರಮ: ವಿಚಾರಗೋಷ್ಠಿ
ದಿನಾಂಕ: ಸೆಪ್ಟೆಂಬರ್ 12, 2026, ಶನಿವಾರ
ಸಮಯ: ಸಂಜೆ 7.15 ಗಂಟೆಗೆ
ಸ್ಥಳ: ಮಿಲಾಫ್ ಶಾದಿ ಮಹಲ್, ಕೋಟೆ, ಸಿಂಧನೂರು
ಆಯೋಜಕರು: ಸೀರತ್ ಸ್ವಾಗತ ಸಮಿತಿ, ಸಿಂಧನೂರು

# ಪರಪ್ಪನ ಅಗ್ರಹಾರ ಜೈಲಲ್ಲಿ ಮೊಬೈಲ್ ಜಾಲ ಪತ್ತೆ : ಮೂವರು ಸಿಬ್ಬಂದಿ ಸೇರಿ 9 ಮಂದಿ ಬಂಧನ

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕೇಂದ್ರ ಕಾರಾಗೃಹದೊಳಗೆ ಪೂರೈಕೆಯಾಗುತ್ತಿದ್ದ ಮೊಬೈಲ್ ಸಾಗಾಣಿಕೆ ಜಾಲವನ್ನು ಭೇದಿ ಸಿರುವ ಪರಪ್ಪನ ಅಗ್ರಹಾರ ಠಾಣೆ ಪೊಲೀಸರು ಮೂವರು ಜೈಲು ಸಿಬ್ಬಂದಿ ಸೇರಿದಂತೆ 9 ಮಂದಿ ಯನ್ನು ಬಂಧಿಸಿದ್ದಾರೆ. ಪರಪ್ಪನ ಅಗ್ರಹಾರ ಕಾರಾಗೃಹದ ಸಿಬ್ಬಂದಿಗಳಾದ ಪ್ರಕಾಶ್ ಮಹಾವೀರ್,ವಿಜಯ್‌ಕುಮಾರ್ ಹಾಗೂ ಶ್ರೀನಿವಾಸ್ ನಾಯ್ಕ ಮತ್ತು ವಿಚಾರಣಾಧೀನ ಖೈದಿ ಪ್ರತಾಪ್ ರಾಯ್, ಪ್ರಜ್ವಲ್ ರೇವಣ್ಣ, ನವೀನ್ ಕುಮಾರ್ , ಸಿದ್ಧಿಕ್ , ಮೊಹಮದ್ ತೌಸಿಫ್ ಮತ್ತು ಮಂಜುನಾಥ್ ಬಂಧಿತರು.ಹಣದ ಆಸೆಗಾಗಿ ಜೈಲಿನೊಳಗಿರುವ ಖೈದಿಗಳಿಗೆ ಒಂದು ಮೊಬೈಲ್‌ಗೆ ಒಂದು ಲಕ್ಷ ರೂ. ಹಾಗೂ ಒಂದು ಸಿಮ್‌ಗೆ 50 ಸಾವಿರ ರೂ. ಪಡೆದುಕೊಳ್ಳಲಾಗುತ್ತಿತ್ತು ಎಂಬ ಮಾಹಿತಿ ತನಿಖೆಯಿಂದ ತಿಳಿದು ಬಂದಿದೆ.**

ಈ ಹಿಂದೆ ಕಾರಾಗೃಹದ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ನಾಲ್ಕು ಮೊಬೈಲ್‌ಗಳು, ಎರಡು ಸಿಮ್ ಕಾರ್ಡ್‌ಗಳು ಹಾಗೂ ಚಾರ್ಜರ್



ಪತ್ತೆಯಾಗಿರುವ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ-ತ್ತು. ಪೊಲೀಸರು ತನಿಖೆ ಮುಂದುವರೆಸಿದಾಗ ಏರ್‌ಟೇಲ್‌ಗೆ ಸೇರಿದ ಎರಡು ಸಿಮ್‌ಗಳ ಮೇಲೆ ನಮೂದಿಸಿದ್ದ ನಂಬರ್ ಆಧಾರದಲ್ಲಿ ಈ ನಂಬರ್‌ಗಳು ಯಾವ ಮೊಬೈಲ್‌ಗಳಲ್ಲಿ ಬಳಕೆಯಾಗಿವೆ ಎಂಬುವುದನ್ನು ಸಿಇಐಆರ್ ಪೋರ್ಟಲ್ ಮೂಲಕ ತಾಂತ್ರಿಕ ಮಾಹಿತಿಯನ್ನು ಸಂಗ್ರಹಿಸಿದ್ದಾರೆ.ಈ ಆಧಾರದ ಮೇಲೆ ಎರಡು ಮೊಬೈಲ್‌ಗಳು ಕೇಂದ್ರ ಕಾರಾಗೃಹದ ವೀಕ್ಷಕ ಸಿಬ್ಬಂದಿ ಶ್ರೀನಿವಾಸ್ ನಾಯ್ಕ ಬಳಿ ಇರುವುದು ಪತ್ತೆಯಾಗುತ್ತಿದ್ದಂತೆ ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ರಾಹುಲ್ ಎಂಬ ಅಪ-ರಿಚಿತನ ಹೆಸರಿನಲ್ಲಿ ಖರೀದಿ ಮಾಡಿರುವುದು ಗೊತ್ತಾಗಿದೆ.ಅಲ್ಲದೇ ಇದೇ ರೀತಿ ಸುಮಾರು 12 ಮೊಬೈಲ್‌ಗಳನ್ನು ಖರೀದಿ ಮಾಡಿ ತನ್ನ ಬಳಿ ಇಟ್ಟುಕೊಂಡು ಅಕ್ರಮವಾಗಿ ಕೇಂದ್ರ ಕಾರಾಗೃಹದೊಳಗೆ ಸರಬರಾಜು ಮಾಡಿರುವುದು ವಿಚಾರಣೆ ವೇಳೆ ಬಹಿರಂಗಗೊಂಡಿದೆ.

ಮತ್ತೊಂದು ಪ್ರಕರಣದಲ್ಲಿ ಕೇಂದ್ರ ಕಾರಾಗೃಹದಲ್ಲಿ ದೊರೆತ ಒಂದು ಮೊಬೈಲ್ ಹಾಗೂ ಸಿಮ್ ಕಾರ್ಡ್ ಬಗ್ಗೆ ಪೊಲೀಸರು ತನಿಖೆ ಚುರುಕುಗೊಳಿಸಿದಾಗ , ಸಿಮ್ ನಂಬರ್ ಆಧಾರದಲ್ಲಿ ಮೊಬೈಲ್ ಕಂಪನಿಯೊಂದಿಗೆ ಸಮಾಲೋಚನೆ ನಡೆಸಿದಾಗ ಆ ಮೊಬೈಲ್ ಆಂಧ್ರ ಪ್ರದೇಶದ ಏಜೆನ್ಸಿಯೊಂದಕ್ಕೆ ಮಾರಾಟವಾಗಿರುವುದು ಗೊತ್ತಾಗಿದೆ.ಈ ಮಾಹಿತಿ ಲಭ್ಯವಾಗುತ್ತಿದ್ದಂತೆ ಮೊಬೈಲ್ ಮಾರಾಟದ ಸಂಪೂರ್ಣ ವಿವರಗಳನ್ನು ಪಡೆದುಕೊಂಡು ಪರಿಶೀಲನೆ ಮಾಡಿದಾಗ ಭರತ್ ಅಲಿಯಾಸ್ ಭುವನ್ ಎಂಬ ವ್ಯಕ್ತಿ ಖರೀದಿ ಮಾಡಿರುವುದು ಗೊತ್ತಾಗಿದೆ.

ಆತನ ಬಗ್ಗೆ ಮಾಹಿತಿ ಕಲೆಹಾಕಿ ಆತನನ್ನು ಪತ್ತೆಹಚ್ಚಿ ಪರಿಶೀಲನೆ ನಡೆಸಿದಾಗ ಕಾರಾಗೃಹದಲ್ಲಿರುವ ಭರತ್ ಅಲಿಯಾಸ್ ಕೆಟಿ-ಎಂ ಭರತ್ ಸೂಚನೆಯಂತೆ ಕೇಂದ್ರ ಕಾರಾಗೃಹದ ಮುಖ್ಯ ವೀಕ್ಷಕ ವಿಜಯ್ ಕುಮಾರ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುವುದಾಗಿ ಹೇಳಿದ್ದಾನೆ.

ಸಿಸಿಬಿ ಪೊಲೀಸರು ನೀಡಿದ ಇನ್ನೊಂದು ಪ್ರಕರಣದಲ್ಲಿ ಕೇಂದ್ರ ಕಾರಾಗೃಹ ಭದ್ರತಾ ವಿಭಾಗ ಬ್ಯಾರಕ್‌ಗಳಲ್ಲಿ ವಿಚಾರಣಾದಿನ ಖೈದಿ ಪ್ರತಾಪ್ ರಾಯ್ ಹಾಗೂ ಪ್ರಜ್ವಲ್ ರೇವಣ್ಣ ಕೊಠಡಿಯಲ್ಲಿ ದೊರೆತ ಸಿಮ್ ಹಾಗೂ ಮೊಬೈಲ್ ನ್ನು ಕಾರಾಗೃಹದ ವಾರ್ಡರ್ ಸಿಬ್ಬಂದಿ ಮೂಲಕ ಸಾಗಾಣೆ ಮಾಡಿರುವುದು ಗೊತ್ತಾಗಿದೆ.ಇದಕ್ಕೆ ಸಂಬಂಧಿಸಿದಂತೆ ಐದು ಮಂದಿಯನ್ನು ಬಂಧಿಸಲಾಗಿದೆ. ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಮೂರು ಪ್ರಕರಣಗಳು ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡು 9 ಮಂದಿಯನ್ನು ಬಂಧಿಸಿದ್ದಾರೆ.

## ವಚನ ದರ್ಶನ

ಭಕ್ತಿ ಎಂತಹದಯ್ಯಾ ದಾಸಯ್ಯ ಮಾಡಿದಂತಹದಯ್ಯಾ. ಭಕ್ತಿ ಎಂತಹದಯ್ಯಾ ಸಿರಿಯಾಳ ಮಾಡಿದಂತಹದಯ್ಯಾ. ಭಕ್ತಿ ಎಂತಹದಯ್ಯಾ ನಮ್ಮ ಬಲ್ಲಾಳ ಮಾಡಿದಂತಹದಯ್ಯಾ. ಭಕ್ತಿ ಎಂತಹದಯ್ಯಾ ಕೂಡಲಸಂಗಮದೇವಾ ನೀ ಬಾಣನ ಬಾಗಿಲ ಕಾದಂತಹದಯ್ಯಾ

ವಿಶ್ವಗುರು, ಭಕ್ತಿ ಭಂಡಾರಿ ಶ್ರೀ ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ವಚನವಾಗಿದೆ. ಈ ವಚನವು ನಿಜವಾದ ಶಿವಭಕ್ತಿಯ ಪರಮಾವಧಿ ಹಾಗೂ ಅದರ ಸ್ವರೂಪ ಎಂತಹದ್ದು ಎಂಬುದನ್ನು ಉದಾಹರಣೆಗಳ ಮೂಲಕ ಸುಂದರವಾಗಿ ವಿವರಿಸುತ್ತದೆ.

ನಿಜವಾದ ಭಕ್ತಿ ಅಂದರೆ ಏನು? ಅದು ಕೇವಲ ತೋರಿಕೆಯ ಪೂಜೆಯಲ್ಲ, ಬದಲಿಗೆ ಭಗವಂತನಿಗಾಗಿ ತನ್ನ ಅತ್ಯಂತ ಪ್ರೀತಿಯ ವಸ್ತುವನ್ನೇ ಸಮರ್ಪಿಸುವ ನಿಷ್ಕಲ್ಮಶ ತ್ಯಾಗದ ಮನೋಭಾವ ಎಂದು ಬಸವಣ್ಣನವರು ಶಿವಶರಣರ ಕಥೆಗಳ ಮೂಲಕ ಇಲ್ಲಿ ತಿಳಿಸಿದ್ದಾರೆ.

ದಾಸಯ್ಯ ಮಾಡಿದಂತಹದಯ್ಯ. ದಾಸಯ್ಯ ಎಂಬ ಶಿವಶರಣ–ರು ಹಸಿವಿನಿಂದ ಬಂದ ಜಂಗಮರಿಗೆ ಶಿವಭಕ್ತರಿಗೆ ಅನ್ನದಾಸೋಹ ಮಾಡಲು ತನ್ನ ಪ್ರಾಣಕ್ಕಿಂತ ಪ್ರೀತಿಯಾಗಿದ್ದ ಹೆಂಡತಿಯನ್ನೇ ಒಡ್ಡಲು ಸಿದ್ಧರಾಗಿದ್ದರು. ಅವರ ನಿಶ್ಚಲ ಭಕ್ತಿ ಇದಾಗಿತ್ತು.

ಸಿರಿಯಾಳ ಮಾಡಿದಂತಹದಯ್ಯ. ಸಿರಿಯಾಳ ಚಾಂಗಭಿಚಟಜ ಶರಣರು ಶಿವನ ಪರೀಕ್ಷೆಗೆ ಒಡ್ಡಿ, ಜಂಗಮ ವೇಷದಲ್ಲಿ ಬಂದ ಶಿವನಿಗೆ ಆಹಾರ ನೀಡಲು ತನ್ನ ಏಕೈಕ ಮಗನಾದ ಸಿರಾಳನನ್ನೇ ಕತ್ತರಿಸಿ ಅಡುಗೆ ಮಾಡಲು ಹಿಂಜರಿಯಲಿಲ್ಲ. ಇದು ಭಕ್ತಿಯ ಪರಮಾವಧಿ ತ್ಯಾಗವನ್ನು ತೋರಿಸುತ್ತದೆ.

ನಮ್ಮ ಬಲ್ಲಾಳ ಮಾಡಿದಂತಹದಯ್ಯ. ಸಿಂಧು ಬಲ್ಲಾಳ ಮಹಾರಾಜನು ತನ್ನ ಮನೆಗೆ ಬಂದ ಜಂಗಮರ ಆಸೆಯನ್ನು ಈಡೇರಿಸಲು ತನ್ನ ಪ್ರೀತಿಯ ಹೆಂಡತಿಯನ್ನೇ ಜಂಗಮರ ಸೇವೆಗೆ ಒಪ್ಪಿಸಲು ಮುಂದಾಗಿದ್ದನು.

ನೀ ಬಾಣನ ಬಾಗಿಲ ಕಾದಂತಹದಯ್ಯ. ಭಕ್ತನು ಈ ರೀತಿಯ ಅಪ್ರತಿಮ ಭಕ್ತಿಯನ್ನು ತೋರಿದಾಗ, ಸ್ವಯಂ ಭಗವಂತನೇ ಕೂಡಲಸಂಗಮದೇವನು ಆ ಭಕ್ತನಿಗೆ ವಶನಾಗುತ್ತಾನೆ. ಇದಕ್ಕೆ ಉದಾಹರಣೆಯಾಗಿ ಬಾಣಾಸುರನ ಭಕ್ತಿಗೆ ಮೆಚ್ಚಿ ಈಶ್ವರನು ಅವನ ಅರಮನೆಯ ದ್ವಾರಪಾಲಕನಾಗಿ ಬಾಗಿಲು ಕಾಯುವಂತೆ ಭಕ್ತನಿಗೆ ದಾಸನಾಗುತ್ತಾನೆ ಎಂದು ಬಸವಣ್ಣನವರು ವರ್ಣಿಸಿದ್ದಾರೆ. ವಿಶ್ವಗುರು ಬಸಣ್ಣನವರ ಈ ವಚನ ನಮಗೂ ನಿಮಗೂ ದಾರಿದೀಪವಾಗಲಿ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು. 998094144

# 250ಕ್ಕೂ ಹೆಚ್ಚು ಜನರಿಗೆ ಚಿಕಿತ್ಸೆ, 20 ರೋಗಿಗಳಿಗೆ ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಯಲ್ಲಿ ಉಚಿತ ಮೇಲ್ದರ್ಜೆ ಚಿಕಿತ್ಸೆಗೆ ಶಿಫಾರಸು

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಶ್ರೀ ಸತ್ಯ ಸಾಯಿ ಸೇವಾ ಸಂಸ್ಥೆಗಳು, ರಾಯಚೂರು ಜಿಲ್ಲೆ ( ಪಗಡದಿನ್ನಿ ಕ್ಯಾಂಪ್ )ಹಾಗೂ ಸಪ್ತಗಿರಿ ಆಸ್ಪತ್ರೆ, ಬೆಂಗಳೂರು, ಇವರ ಸಹಯೋಗದಲ್ಲಿ ಮತ್ತು ಸನ್ ರೈಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್, ಸಿಂಧನೂರು ಇವರ ಸಹಕಾರದೊಂದಿಗೆ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವು ಸಿಂಧನೂರಿನಲ್ಲಿ ಯಶಸ್ವಿಯಾಗಿ ನೆರವೇರಿತು.**

ಸಿಂಧನೂರಿನ ಸಾಯಿದರ್ಶಿನಿ ಕಲ್ಯಾಣ ಮಂಟಪದಲ್ಲಿ ನಡೆದ ಈ ಆರೋಗ್ಯ ಶಿಬಿರದಲ್ಲಿ ಸುತ್ತಮುತ್ತಲಿನ ಗ್ರಾಮಗಳು ಹಾಗೂ ಪಟ್ಟಣದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಆರೋಗ್ಯ ತಪಾಸಣೆ ಹಾಗೂ ವೈದ್ಯಕೀಯ ಸೇವೆಯ ಸದುಪಯೋಗ ಪಡೆದುಕೊಂಡರು. ಶಿಬಿರದಲ್ಲಿ ಒಟ್ಟು 250ಕ್ಕೂ ಹೆಚ್ಚು ರೋಗಿಗಳನ್ನು ತಪಾಸಣೆ ನಡೆಸಲಾಯಿತು. ತಜ್ಞ ವೈದ್ಯರು ರೋಗಿಗಳ ಆರೋಗ್ಯ ಸಮಸ್ಯೆಗಳನ್ನು ಪರಿಶೀಲಿಸಿ ಅಗತ್ಯ ಸಲಹೆ ಹಾಗೂ ಚಿಕಿತ್ಸೆಯನ್ನು ನೀಡಿದರು. ಅಗತ್ಯವಿದ್ದ ರೋಗಿಗಳಿಗೆ ಇಸಿಜಿ, ಎಕೋ ಸೇ–ರಿದಂತೆ ವಿವಿಧ ವೈದ್ಯಕೀಯ ಪರೀಕ್ಷೆಗಳನ್ನು ಉಚಿತವಾಗಿ ಮಾಡಲಾಯಿತು. ಪರೀಕ್ಷೆಗಳ ವರದಿಗಳ ಆಧಾರದ ಮೇಲೆ ರೋಗಿಗಳಿಗೆ ವೈದ್ಯಕೀಯ ಸಲಹೆ, ಔಷಧೋಪಚಾರ ಹಾಗೂ ಅಗತ್ಯ ಮಾರ್ಗದರ್ಶನವನ್ನು ಉಚಿತವಾಗಿ ನೀಡಲಾಯಿತು.

ಶಿಬಿರದಲ್ಲಿ ತಪಾಸಣೆಗೊಂಡ ರೋಗಿಗಳ ಪೈಕಿ ಹೆಚ್ಚಿನ ವೈದ್ಯಕೀಯ ಚಿಕಿತ್ಸೆ ಅಗತ್ಯವಿದ್ದ 20 ಜನ ರೋಗಿಗಳನ್ನು ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ಉಚಿತವಾಗಿ ಶಿಫಾರಸು ಮಾಡಲಾಯಿತು. ಇದರಿಂದ ಆರ್ಥಿಕವಾಗಿ ಹಿಂದುಳಿದ ಹಾಗೂ ತಜ್ಞ ಚಿಕಿತ್ಸೆಯ ಅಗತ್ಯವಿದ್ದ ರೋಗಿಗಳಿಗೆ ದೊಡ್ಡ ಮಟ್ಟದ ಸಹಾಯ ದೊರೆತಂತಾಗಿದೆ. ವೈದ್ಯರು ಹಾಗೂ ವಿದ್ಯಾರ್ಥಿಗಳ ಸೇವೆ ಸಪ್ತಗಿರಿ ಆಸ್ಪತ್ರೆ, ಬೆಂಗಳೂರಿನ ಪ್ರತಿಷ್ಠಿತ ಹಾಗೂ ತಜ್ಞ ವೈದ್ಯರು ಶಿಬಿರದಲ್ಲಿ ಭಾಗವಹಿಸಿ









ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿ, ವಿವಿಧ ಕಾಯಿಲೆಗಳ ಕುರಿತು ಸೂಕ್ತ ಸಲಹೆ ಮತ್ತು ಚಿಕಿತ್ಸಾ ಮಾರ್ಗದರ್ಶನ ನೀಡಿದರು. ಇದೇ ಸಂದರ್ಭದಲ್ಲಿ ಸನ್ ರೈಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಜಿ. ಅವರ ಮಾರ್ಗದರ್ಶನದಲ್ಲಿ ಸಂಸ್ಥೆಯ ವಿದ್ಯಾರ್ಥಿಗಳು ಶಿಬಿರದ ವಿವಿಧ ಸೇವಾ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡರು.

ರೋಗಿಗಳ ನೋಂದಣಿ, ತಪಾಸಣೆಗೆ ಅಗತ್ಯ ವ್ಯವಸ್ಥೆ, ರೋಗಿಗಳನ್ನು ಸಂಬಂಧಪಟ್ಟ ವಿಭಾಗಗಳಿಗೆ ಕರೆದೊಯ್ಯುವುದು, ವೈದ್ಯರಿಗೆ ಸಹಕಾರ ನೀಡುವುದು ಹಾಗೂ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ಒದಗಿಸುವಲ್ಲಿ ವಿದ್ಯಾರ್ಥಿಗಳು ಶಿಸ್ತುಬದ್ಧವಾಗಿ ಕಾರ್ಯನಿರ್ವಹಿಸಿದರು. ವಿದ್ಯಾರ್ಥಿಗಳ ಸೇವಾ ಮನೋಭಾವ, ಶಿಸ್ತು ಹಾಗೂ ಮಾನವೀಯತೆಯನ್ನು ಸಾರ್ವಜನಿಕರು ಪ್ರಶಂಸಿಸಿದರು. ವೈದ್ಯಕೀಯ ಶಿಕ್ಷಣದ ಜೊತೆಗೆ ಸಮಾಜಮುಖಿ ಸೇವೆಯ ಅನುಭವವನ್ನು ವಿದ್ಯಾರ್ಥಿಗಳಿಗೆ ನೀಡಿದ ಈ ಶಿಬಿರವು ವಿಶೇಷ ಮಹತ್ವವನ್ನು ಪಡೆದುಕೊಂಡಿತು. ಶಿಬಿರದ ಆಯೋಜನೆಯಲ್ಲಿ ಶ್ರೀ ಚಟ್ಟೂರಿ ಶ್ರೀನಿವಾಸ್ (ವಾಸು) ಅವರ ಪ್ರಮುಖ ಪಾತ್ರ ಈ ಉಚಿತ ಆರೋಗ್ಯ ತಪಾಸಣಾ ಶಿಬಿರದ ಯಶಸ್ಸಿನ ಹಿಂದೆ ಶ್ರೀ ಚಟ್ಟೂರಿ ಶ್ರೀನಿವಾಸ್ (ವಾಸು), ಸಂಚಾಲಕರು, ಅಖಿಲ ಕರ್ನಾಟಕ ಕಮ್ಮ ಯುವಶಕ್ತಿ, ಪಿಡಬ್ಲ್ಯೂಡಿ ಕ್ಯಾಂಪ್, ಸಿಂಧನೂರು, ಅವರ ಪ್ರಮುಖ ಪಾತ್ರವಿತ್ತು. ಅವರು ಕಾರ್ಯಕ್ರಮದ ಆಯೋಜನೆಯಲ್ಲಿ ಮುಂಚೂಣಿಯಲ್ಲಿ ನಿಂತು, ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸಾರ್ವಜನಿಕ–ರಿಗೆ ತಲುಪಿಸುವಲ್ಲಿ ಹಾಗೂ ವಿವಿಧ ವ್ಯವಸ್ಥೆಗಳನ್ನು ಸಮನ್ವಯಗೊಳಿಸುವಲ್ಲಿ ಪ್ರಮುಖವಾಗಿ ಕಾರ್ಯನಿರ್ವಹಿಸಿದರು.

ಅವರ ನೇತೃತ್ವದಲ್ಲಿ ವೈದ್ಯರು, ಆಸ್ಪತ್ರೆಯ ಸಿಬ್ಬಂದಿ, ಶಿಕ್ಷಣ ಸಂಸ್ಥೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ನಡುವೆ ಉತ್ತಮ ಸಮನ್ವಯ ಸಾಧಿಸಲಾಯಿತು. ಶಿಬಿರಕ್ಕೆ ಆಗಮಿಸಿದ ಪ್ರತಿಯೊಬ್ಬ ರೋಗಿಗೂ ಸೂಕ್ತ ರೀತಿಯಲ್ಲಿ ಸೇವೆ ದೊರೆಯುವಂತೆ ಅಗತ್ಯ ವ್ಯವಸ್ಥೆ ಮಾಡಲಾಗಿತ್ತು. ರೋಗಿಗಳು ಹಾಗೂ ಭಕ್ತಾದಿಗಳಿಗೆ ಉಚಿತ ಭೋಜನ ವ್ಯವಸ್ಥೆ ಶಿಬಿರಕ್ಕೆ ಆಗಮಿಸಿದ ರೋಗಿಗಳು, ಅವರ ಸಂಬಂಧಿಕರು ಹಾಗೂ ಭಕ್ತಾದಿಗಳಿಗಾಗಿ ಉಚಿತ ಭೋಜನದ ವ್ಯವಸ್ಥೆಯನ್ನೂ ಮಾಡಲಾಗಿ–ತ್ತು. ಆರೋಗ್ಯ ಸೇವೆಯೊಂದಿಗೆ ಮಾನವೀಯ ಕಾಳಜಿಯನ್ನು ಒಗ್ಗೂಡಿಸಿದ ಈ ವ್ಯವಸ್ಥೆ ಶಿಬಿರದ ವಿಶೇಷ ಆಕರ್ಷಣೆಯಾಗಿತ್ತು. ಒಟ್ಟಾರೆ, ಉಚಿತ ಆರೋಗ್ಯ ತಪಾಸಣೆ, ಇಸಿಜಿ?–ಎಕೋ ಸೇರಿದಂತೆ ಅಗತ್ಯ ಪರೀಕ್ಷೆಗಳು, ಉಚಿತ ಔಷಧೋಪಚಾರ ಹಾಗೂ ಹೆಚ್ಚಿನ ಚಿಕಿತ್ಸೆಗೆ ಉಚಿತ ಶಿಫಾರಸುಗಳನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ಮೂಲಕ ಈ ಶಿಬಿರವು ಸಾರ್ವಜನಿಕ–ರಿಗೆ ಅತ್ಯಂತ ಪ್ರಯೋಜನಕಾರಿಯಾಯಿತು.

ಆರೋಗ್ಯ ಸೇವೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು ಎಂಬ ಸದುದ್ದೇಶದಿಂದ ನಡೆದ ಈ ಶಿಬಿರವು ವೈದ್ಯಕೀಯ ಸೇವೆ, ಶಿಕ್ಷಣ ಸಂಸ್ಥೆಯ ಸಾಮಾಜಿಕ ಜವಾಬ್ದಾರಿ ಮತ್ತು ಸೇವಾ ಮನೋಭಾವದ ಅತ್ಯುತ್ತಮ ಸಮನ್ವಯಕ್ಕೆ ಸಾಕ್ಷಿಯಾಯಿತು. ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಶ್ರೀ ಸತ್ಯ ಸಾಯಿ ಸೇವಾ ಸಂಸ್ಥೆಗಳು, ಸಪ್ತಗಿರಿ ಆಸ್ಪತ್ರೆ ಬೆಂಗಳೂರು, ಸನ್ ರೈಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಸಿಂಧನೂರು, ವೈದ್ಯರು, ವೈದ್ಯಕೀಯ ಸಿಬ್ಬಂದಿ, ಪ್ರಾಚಾರ್ಯರು ಲಾಜರ್ ಸಿರಿಲ್ ಜಿ., ವಿದ್ಯಾರ್ಥಿಗಳು, ಸ್ವಯಂಸೇವಕರು ಹಾಗೂ ಶ್ರೀ ಚಟ್ಟೂರಿ ಶ್ರೀನಿವಾಸ್ (ವಾಸು) ಅವರ ಸೇವೆಯನ್ನು ಸಾರ್ವಜನಿಕರು ಅಭಿನಂದಿಸಿದರು. "ಆರೋಗ್ಯವಂತ ಸಮಾಜವೇ ಸದೃಢ ಸಮಾಜ" ಎಂಬ ಸಂದೇಶವನ್ನು ಸಾರಿದ ಈ ಶಿಬಿರವು ಸಿಂಧನೂರಿನ ಜನತೆಗೆ ಸಾರ್ಥಕವಾದ ಸೇವಾ ಕಾರ್ಯಕ್ರಮವಾಗಿ ನೆನಪಿನಲ್ಲಿ ಉಳಿಯಿತು.

## ಸೆ. 17ರಂದು ಕಂಪ್ಲಿಯಲ್ಲಿ ವಿಶ್ವಕರ್ಮ ಜಯಂತಿ ಅರ್ಥಪೂರ್ಣ ಆಚರಣೆಗೆ : ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

**ತಾಲೂಕು ಆಡಳಿತ ಹಾಗೂ ವಿಶ್ವಕರ್ಮ ಸಮಾಜದ ಸಹಯೋಗದಲ್ಲಿ ಇದೇ ಸೆಪ್ಟೆಂಬರ್ 17ರಂದು ವಿಶ್ವಕರ್ಮ ಜಯಂತ್ಯೋತ್ಸವವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಪ್ರಭಾರಿ ಉಪ ತಹಶೀಲ್ದಾರ್ ರಮೇಶ್ ತಿಳಿಸಿದರು.**




ಪಟ್ಟಣದ ತಹಶೀಲ್ದಾರ್ ಕಛೇ–ರಿಯ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಹಶೀಲ್ದಾರ್ ಕಛೇರಿಯಲ್ಲಿ ನಡೆಯಲಿರುವ ಈ ಸೌಹಾರ್ದಯುತ ಕಾರ್ಯಕ್ರಮದಲ್ಲಿ ಆನೆಗುಂದಿ ಮೂಲ ಸಂಸ್ಥಾಪನದ ಸರಸ್ವತಿ ಪೀಠದ ಶ್ರೀ ವಿಶ್ವಕರ್ಮ ಜಗದ್ಗುರು ಶಿವಕುಮಾರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಸ್ಥಳೀಯ ಶಾಸಕರು ಸೇರಿದಂತೆ ಹಲವು ಜನಪ್ರತಿನಿಧಿಗಳು ಭಾಗವಹಿಸಲಿದ್ದು, ಇದೇ ಸಂದರ್ಭದಲ್ಲಿ ಸಮಾಜದ ಪ್ರಮುಖ ಗೌರವಾನ್ವಿತರಿಗೆ ಗೌರವ ಸನ್ಮಾನವನ್ನು ಆಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಸಭೆಯಲ್ಲಿ ವಿಶ್ವಕರ್ಮ ಸಮಾಜದ ಅಧ್ಯಕ್ಷ ಡಿ.ರುದ್ರಪ್ಪ ಆಚಾರ್, ಪ್ರಧಾನ ಮುಖಂಡರಾದ ಎಂ.ಮಂಜುನಾಥ, ಗುರುಮೂರ್ತಿ ಆಚಾರ್, ಅಣ್ಣಿಗೇರಿ ವೀರಭದ್ರ ಆಚಾರ್, ನೀಲಕಂಠಾಚಾರ್, ಗಣೇಶ್ ಆಚಾರ್, ಚಂದ್ರಶೇಖರ ಆಚ–ಾರ್, ನಾರಾಯಣ, ಮೆಟ್ರಿ ಷಣ್ಮುಕ, ರಾಘವೇಂದ್ರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಕಛೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

# 'ಸಿದ್ದರಾಮಯ್ಯ ದೆಹಲಿ ಪ್ರವಾಸದ ಹಿಂದೆ ಯಾವುದೇ ಅಸಮಾಧಾನವಿಲ್ಲ': ಡಾ. ಜಿ. ಪರಮೇಶ್ವರ್ ಸ್ಪಷ್ಟನೆ

ನೈಜ್ಯ ದೆಸೆ ನ್ಯೂಸ್

**ತಾಂಡವಪುರ: ಸಿದ್ದರಾಮಯ್ಯರವರು ಸಿಡಬ್ಲ್ಯೂಸಿ ಸದಸ್ಯರಾಗಿರುವುದರಿಂದ ದೆಹಲಿ ಭೇಟಿ ಸಹಜ ಸಿದ್ದರಾಮಯ್ಯನವರ ದೆಹಲಿ ಭೇಟಿ ಹಿಂದೆ ಯಾವುದೇ ಅಸಮಾಧಾನದ ಕಾರಣಗಳಿಲ್ಲ. ಹಾಗೊಂದು ವೇಳೆ ಅಸಮಾಧಾನ ಇದ್ದಿದ್ದರೆ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆಯನ್ನೇ ಕೊಡುತ್ತಿರಲಿಲ್ಲ. ಎಂದು ಉಪಮುಖ್ಯಮಂತ್ರಿ ಡಾ. ಜಿ ಪರಮೇಶ್ವರ್ ಹೇಳಿದರು ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುವುದಾಗಿ ಸಿದ್ದರಾಮಯ್ಯನವರು ಮೊದಲಿನಿಂದಲೂ ಹೇಳುತ್ತ ಬಂದಿದ್ದರು. ಅದರಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ.**

ಇದು ಮುಗಿದು ಹೋದ ಅಧ್ಯಾಯ. ಈ ವಿಚಾರವಾಗಿ ಪುನಃ ಪುನಃ ಚರ್ಚೆ ಮಾಡುವುದರಲ್ಲಿ ಅರ್ಥವಿಲ್ಲ. ಸಿದ್ದರಾಮಯ್ಯ ಅವರು ಪ್ರಸ್ತುತ ಕಾಂಗ್ರೆಸ್ ಕಾರ್ಯಕಾರಿಣಿ ಸಮಿತಿ ಸದಸ್ಯರಾಗಿರುವುದ–ರಿಂದ ದೆಹಲಿ ಭೇಟಿ ಸಹಜ ಪ್ರಕ್ರಿಯೆಯಾಗಿದೆ. ಅದಕ್ಕೆ ಬೇರೆ ಅರ್ಥಗಳನ್ನು ಕಲ್ಪಿಸಬಾರದು.



ಎಂದು ಪರಮೇಶ್ವರ ರವರು ವಿನಂತಿಸಿದರು ಅವರು ಇಂದು ಬೆಂಗಳೂರಿನ ತಮ್ಮ ನಿವಾಸದಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ನೇತೃತ್ವದ ನಮ್ಮ ಸರ್ಕಾರಕ್ಕೆ 100 ದಿನಗಳು ಪೂರೈಸಿವೆ. ಸಾಕಷ್ಟು ಸವಾಲುಗಳು ನಮ್ಮ ಮುಂದಿವೆ. ಧೃತಿಗೆಡದೆ ಎಲ್ಲವನ್ನೂ ನಿಭಾಯಿಸಿಕೊಂಡು ಉತ್ತಮ ಆಡಳಿತ ನೀಡುತ್ತೇವೆ. ಎಂದು ಹೇಳಿದ ಅವರು

*ಅವಿರೋಧ ಆಯ್ಕೆ ಕಾರಣಕ್ಕೆ ಎಸ್. ರವಿಗೆ ಅವಕಾಶ : ಅವಿರೋಧವಾಗಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನು ಆಯ್ಕೆ ಮಾಡಬೇಕು, ಚುನಾವಣೆ ನಡೆಸುವುದು ಬೇಡ ಎಂಬುದು ನಮ್ಮ ಪಕ್ಷದ ನಿರ್ಧಾರವಾಗಿತ್ತು. ಹಾಗಾಗಿ ಕೊನೆಯ ಹಂತದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್. ರವಿ ಅವರನ್ನು ಆಯ್ಕೆ ಮಾಡಲಾಗಿದೆ. ನಿರ್ಣಾಯಕ ಸಭೆಯಲ್ಲಿ ಕೆ. ಎನ್. ರಾಜಣ್ಣ ಅವರೂ ಹಾಜರಿದ್ದರು. ಅವರ ಸಮ್ಮತಿ ಮೇರೆಗೆ ಅಧ್ಯಕ್ಷರ ಆಯ್ಕೆ ನಡೆದಿದೆ. ಹಾಗಾಗಿ ಈ ವಿಚಾರದಲ್ಲಿ ಅಸಮಾಧಾನದ ಪ್ರಶ್ನೆ ಉದ್ಭವಿಸುವುದಿಲ್ಲ. ಅಪೆಕ್ಸ್ ಬ್ಯಾಂಕ್ ಸ್ವತಂತ್ರ ಹಾಗೂ ಪಕ್ಷಾತೀತ ಸಂಸ್ಥೆಯಾಗಿದೆ. ಅದರ ಆಡಳಿತ ಮಂಡಳಿಯ ನಿರ್ದೇಶಕರು ಮುಂದಿನ ತೀರ್ಮಾನ ತೆಗೆದುಕೊಳ್ಳುತ್ತಾರೆ.

*ತುಮಕೂರಿಗೆ ನಕ್ಸಲ್ ನಿಗ್ರಹ ದಳ: ತುಮಕೂರು ಜಿಲ್ಲೆಯ ಪಾವಗಡದಲ್ಲಿ ನಕ್ಸಲ್ ಚಟುವಟಿಕೆಗೆ ಸಂಬಂಧಿಸಿದ ಪೋಸ್ಟರ್ ಪ್ರತ್ಯಕ್ಷವಾಗಿರುವ ವಿಚಾರ ನನ್ನ ಗಮನಕ್ಕೆ ಬಂದಿದೆ.

ಇಂದು ತುಮಕೂರಿಗೆ ಭೇಟಿ ನೀಡುತ್ತಿದ್ದೇನೆ. ಅಲ್ಲಿಯ ಎಸ್‌ಪಿ ಅವರ ಜೊತೆ ಈ ಕುರಿತು ಚರ್ಚೆ ಮಾಡುತ್ತೇನೆ. ಅಂತಹ ಬೆಳವಣಿಗೆ ಕಂಡುಬಂದರೆ ಹೆಚ್ಚುವರಿ ಪಡೆಯನ್ನು ನಿಯೋಜಿಸಲಾಗುವುದು. ನಕ್ಸಲ್ ಮುಕ್ತ ಕರ್ನಾಟಕ ಘೋಷಣೆ ಬಳಿಕ ಕಾರ್ಕಳದಲ್ಲಿದ್ದ ನಕ್ಸಲ್ ನಿಗ್ರಹ ದಳವನ್ನು ಸಂಪೂರ್ಣವಾಗಿ ಮುಚ್ಚಿಲ್ಲ. ಅರ್ಧ ಪಡೆಯನ್ನು ಕೋಮು ಗಲಭೆ ನಿಯಂತ್ರಣ–ಕ್ಕಾಗಿ ಸ್ಪೆಷಲ್ ಆ?ಯಕ್ಷನ್ ಫೋರ್ಸ್ ಆಗಿ ಪರಿವರ್ತಿಸಲಾಗಿದೆ. ಇನ್ನರ್ಧ ಪಡೆ ನಕ್ಸಲ್ ನಿಗ್ರಹ ದಳ ಆಗಿಯೇ ಕಾರ್ಯಾಚರಣೆ ನಡೆಸುತ್ತಿದೆ. ಪಾವಗಡದಲ್ಲಿ ನಕ್ಸಲ್ ಚಟುವಟಿಕೆ ಖಾತರಿಯಾದರೆ ನಕ್ಸಲ್ ನಿಗ್ರಹ ಪಡೆಯನ್ನು ತುಮಕೂರಿಗೆ ಕರೆಸುತ್ತೇವೆ.

*ಮಾಜಿ ಯೋಧರಿಗೂ ನಿವೇಶನ: ವಸತಿ ರಹಿತರಿಗಾಗಿ ಪ್ರತಿ ಜಿಲ್ಲೆಗೆ 30ಥ40 ಅಡಿ ಅಳತೆಯ 50 ಸಾವಿರ ನಿವೇಶನಗಳನ್ನು ಹಂಚಿಕೆ ಮಾಡುವ ಯೋಜನೆಯಡಿ ಮಾಜಿ ಯೋಧ–ರಿಗೂ ನಿವೇಶನ ನೀಡಲಾಗುವುದು. ಮೊದಲ ಹಂತದಲ್ಲಿ ಮುಂದಿನ ಎರಡು ತಿಂಗಳಲ್ಲಿ ರಾಜ್ಯಾದ್ಯಂತ 5 ಲಕ್ಷ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು. ಎಂದು ಹೇಳಿದರು

## ಕಾಡಂಚಿನ ಹಾದಿಯಲ್ಲೂ ಗೆದ್ದ ಹೆತ್ತ ಕರುಳಿನ ಮಮತೆ: 20 ವರ್ಷಗಳ ನಂತರ ಒಂದಾದ ತಾಯಿ–ಮಗಳು

ನೈಜ್ಯ ದೆಸೆ ನ್ಯೂಸ್

**ಬೆಳ್ತಂಗಡಿ: 20 ವರ್ಷಗಳ ಬಳಿಕ 105ರ ತಾಯಿಯನ್ನು ಭೇಟಿಯಾದ 85ರ ಮಗಳು! ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಕಾಡಂಚಿನ ಗ್ರಾಮವಾದ ಮಕ್ಕಿಯಲ್ಲಿ ಇತ್ತೀಚೆಗೆ ಅತ್ಯಂತ ಅಪರೂಪದ ಹಾಗೂ ಕಣ್ಣಾಲಿಗಳನ್ನು ಒದ್ದೆಯಾಗಿಸುವ ಘಟನೆಯೊಂದು ನಡೆದಿದೆ. ಹೆತ್ತ ತಾಯಿಯ ಮುಖ ನೋಡಲು 85 ವರ್ಷದ ವೃದ್ಧ ಮಗಳೊಬ್ಬರು ದುರ್ಗಮ ಕಾಡಿನ ಹಾದಿಯನ್ನು ಸವೆಸಿ ಬಂದಿದ್ದು, ಬರೋಬ್ಬರಿ 20 ವರ್ಷಗಳ ಬಳಿಕ ತಾಯಿ–ಮಗಳ ಸಮಾಗಮವಾಗಿದೆ.**

ರಸ್ತೆ ಇಲ್ಲದ ಊರು : ದೂರವಾದ ತಾಯಿ–ಮಗಳು ಮಕ್ಕಿ ಗ್ರಾಮದ ನಿವಾಸಿ 105 ವರ್ಷದ ಸೀತಮ್ಮ ಅವರ ಮಗಳು ಸುಶೀಲಾ (85) ಅವರನ್ನು ಪಕ್ಕದ ಮಲವಂತಿಗೆ ಗ್ರಾಮಕ್ಕೆ ವಿವಾಹ ಮಾಡಿಕೊಡಲಾಗಿತ್ತು. ಎರಡು ಗ್ರಾಮಗಳು ಪಕ್ಕದಲ್ಲೇ ಇದ್ದರೂ, ತವರು ಮನೆಗೆ ಹೋಗಲು ಯಾವುದೇ ಸರಿಯಾದ ರಸ್ತೆ ವ್ಯವಸ್ಥೆ ಇರಲಿಲ್ಲ. ಈ ದುರ್ಗಮ ಹಾದಿಯಲ್ಲಿ ಸಂಚ–ರಿಸುವುದು ವಯಸ್ಸಾದಂತೆ ಸುಶೀಲಾ ಅವರಿಗೆ ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಅವರು ಕಳೆದ 20 ವರ್ಷಗಳಿಂದ ತವರು ಮನೆಗೆ ಹೋಗುವುದನ್ನೇ





ನಿಲ್ಲಿಸಿದ್ದರು. ತಮ್ಮ 65ನೇ ವಯಸ್ಸಿನಲ್ಲಿ ತಾಯಿಯನ್ನು ನೋಡಿದ್ದೇ ಕೊನೆ, ಆ ಬಳಿಕ ತಾಯಿಯನ್ನು ಕಾಣುವುದು ಅವ–ರಿಗೆ ಕೇವಲ ಕನಸಾಗಿಯೇ ಉಳಿದಿತ್ತು.

ಮೊಮ್ಮಕ್ಕಳ ಆಸರೆ; ನನಸಾದ ಕನಸು ತಾಯಿಯನ್ನು ನೋಡಲೇಬೇಕೆಂಬ ವೃದ್ಧ ಮಗಳ ಹಂಬಲವನ್ನು ಅರಿತ ಮೊಮ್ಮಕ್ಕಳು ಅವರ ನೆರವಿಗೆ ನಿಂತರು. ಮೊಮ್ಮಕ್ಕಳ ಸಹಾಯದಿಂದ ಕಾಡು–ಮೇಡು, ಕಲ್ಲು–ಮುಳ್ಳಿನ ದುರ್ಗಮ ಹಾದಿಯನ್ನು ಕ್ರಮಿಸಿ, ವಯಸ್ಸಿನ ದಣಿವನ್ನು ಲೆಕ್ಕಿಸದೆ ಸುಶೀಲಾ ಅವರು ಕೊನೆಗೂ ತಾಯಿ ಸೀತಮ್ಮ ಅವರ ಮನೆಗೆ ಬಂದು ತಲುಪಿದರು.ಭವ್ಯ ಕ್ಷಣಕ್ಕೆ ಸಾಕ್ಷಿಯಾದ ತವರು ಮನೆನೂರು ವರ್ಷ ದಾಟಿದ ತಾಯಿ ಮತ್ತು ಎಂಬತ್ತರ ಹರೆಯದ ಮಗಳು ಪರಸ್ಪರ ಎದುರಾದಾಗ ಅಲ್ಲಿ ಭಾವನೆಗಳ ಮಹಾಪೂರವೇ ಹರಿಯಿತು. ಇಬ್ಬರ ಕಣ್ಣುಗಳೂ ಆನಂದಬಾಷ್ಪದಿಂದ ತುಂಬಿ ಬಂದವು. ತಾಯಿಯನ್ನು ಗಟ್ಟಿಯಾಗಿ ಅಪ್ಪಿಕೊಂಡ ಮಗಳು ಸುಶೀಲಾ, "ಅಮ್ಮಾ, ಇದೇ ನಮ್ಮ ಕೊನೆಯ ಭೇಟಿ" ಎಂದು ಭಾವುಕರಾಗಿ ನುಡಿದಾಗ ನೆರೆದಿದ್ದವರ ಕಣ್ಣುಗಳೂ ತೇವಗೊಂಡವು. ವೃದ್ಧಾಪ್ಯದ ದಣಿವು, ರಸ್ತೆ ಸಂಪರ್ಕದ ಕೊರತೆ ಎಲ್ಲವನ್ನೂ ಮೀರಿ ನಿಂತ ಹೆತ್ತ ಕರುಳಿನ ಈ ಅಪೂರ್ವ ಬಂಧದ ಭೇಟಿ ಇಡೀ ಜಿಲ್ಲೆಯ ಜನರ ಮನ ಸೆಳೆದಿದೆ. ಜಗತ್ತಿನಲ್ಲಿ ಕಣ್ಣಿಗೆ ಕಾಣುವ ದೇವರೇ ತಾಯಿ, ದುಡ್ಡು ಕೊಟ್ಟರೂ ಸಿಗದ ಸೌಭಾಗ್ಯ ತಾಯಿಯ ಮಮತೆ.

## ಮೃತಪಟ್ಟ 9 ಜನ ರೈತ ಕುಟುಂಬಗಳಿಗೆ ಕ್ಷೇಮಾಭಿವೃದ್ಧಿ ನಿಧಿಯಿಂದ ತಲಾ 50 ಸಾವಿರ ರೂ.ಗಳ ಆರ್ಥಿಕ ಸಹಾಯದ ಚೆಕ್ ವಿತರಣೆ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ರೈತರ ಹಿತದೃಷ್ಟಿಯಿಂದ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪಿಸಿದ್ದು, ಪ್ರಸಕ್ತ ವರ್ಷದಲ್ಲಿ ಮೃತಪಟ್ಟ 9 ಜನ ರೈತ ಕುಟುಂಬಗಳಿಗೆ ತಲಾ 50 ಸಾವಿರ ಆರ್ಥಿಕ ಪರಿಹಾರವನ್ನು ಕ್ಷೇಮಾಭಿವೃದ್ಧಿ ನಿಧಿಯಿಂದ ವಿತರಿಸಿದ್ದು, ಈ ಆರ್ಥಿಹ ಸಹಾಯವು ಕುಟುಂಬದ ನಿರ್ವಹಣೆಗೆ ಬಳಕೆಯಾಗುವ ಮೂಲಕ ಉತ್ತಮ ಜೀವನ ಕಟ್ಟಿಕೊಳ್ಳಬೇಕು ಎಂದು ಸಂಘದ ಅಧ್ಯಕ್ಷ ಗುಂಡಾಲ ಯರ?ರಿಸ್ವಾಮಿ ಹೇಳಿದರು. ಸಮೀಪದ ಕುಡತಿನಿ ಪಟ್ಟಣದಲ್ಲಿರುವ**

ವಿವಿದೋದ್ದೇಶ ಪ್ರಾಥ–'ಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮದೊಂದಿಗೆ ವಾರ್ಷಿಕ ಮಹಾಜನ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಸಂಘವು 8210 ಜನ ಸದಸ್ಯರನ್ನು ಹೊಂದಿದ್ದು, ಸುಮಾರು 2 ಕೋಟಿ 8 ಲಕ್ಷ ಷೇರು ಬಂಡವಾಳವಿದೆ. 1003 ಜನರಿಗೆ ಸುಮಾರು 11 ಕೋಟಿ 28 ಲಕ್ಷ ಕೆಪಿಸಿಸಿ ಸಾಲ, 30 ಜನಕ್ಕೆ 1 ಕೋಟಿ 60 ಲಕ್ಷ ಮಧ್ಯಮಾವಧಿ ಸಾಲ, 14 ಜನರಿಗೆ ಸುಮಾರು 15 ಲಕ್ಷ ಕೃಷಿಯೇತರ ಸಾಲ ವಿತರಿಸಿದೆ. ಸುಮಾರು 1 ಕೋಟಿ 62 ಲಕ್ಷ ರಸಗೊಬ್ಬರ



ವ್ಯಾಪಾರ ವಹಿವಾಟು ನಡೆಸಿ, ಸುಮಾರು 6 ಲಕ್ಷ 31 ಸಾವಿರ ವ್ಯಾಪಾರ ಲಾಭವಗಳಿಸಿದೆ. ಸುಮಾರು 5 ಲಕ್ಷ 26 ಲಕ್ಷ ಎರಡು ಮಹಿಳಾ ಗುಂಪುಗಳಿಗೆ ವಿತರಿಸಿದೆ. ಎಸ್ಸೆಸ್ಸೆಲ್ಸಿ, ಪಿಯುಸಿಯ ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹಧನ ನೀಡಲಾಯಿತು. 480 ಕುಟುಂಗಳಿಗೆ ಯಶಸ್ವಿನಿ ಯೋಜನೆ ಅಳವಡಿಸಲಾಗಿದೆ. 20 ಜನರು ಯಶಸ್ವಿನಿ ಯೋಜನೆಯನ್ನು ಸದುಪಯೋಗ ಪಡಿಸಿಕೊಂಡಿದ್ದಾರೆ. ಸಂಘವು ಸುಮಾರು 8 ಲಕ್ಷ 2 ಸಾವಿರ ನಿವ್ವಳ ಲಾಭಗಳಿಸಿದೆ ಎಂದರು.

ನಂತರ ಮುಖ್ಯಕಾರ್ಯನಿರ್ವಾಹಕ ಆಂಜನೇಯ ಪದ್ಮಶಾಲಿ ಇವರು ಮಹಾಜನ ಸಭೆಯ ವಾರ್ಷಿಕ ವರದಿ ಮಂಡಿಸಿದರು. ತದನಂತರ ಸಂಘದ ಅಭಿವೃದ್ಧಿಗೆ ಸಂಬಂಧಿಸಿಡಂತೆ ರೈತರೊಂದಿಗೆ ಕೆಲವೊಂದು ವಿಷಯಗಳನ್ನು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಡಿಆರ್ ವೀರಭದ್ರಯ್ಯ, ಸಿಎ ರ?ರಿಸ್ವಾಮಿ, ಡಿಜಿಎಂ ಮರಿಸ್ವಾಮಿ, ಉಪಾಧ್ಯಕ್ಷ ವೈ. ಷಣ್ಮುಖ, ನಿರ್ದೇಶಕರಾದ ಪಿ.ಅನಿಲ, ಟಿ.ಬಸವರಾಜ, ಪರಶುರಾಮ ಚೌಡ್ಕಿ, ಬಿ.ನಾಗಲಿಂಗಪ್ಪ ಆಚಾರಿ, ಹೆಚ್. ಚಂದ್ರಹಾಸ, ಎಸ್.ನಾಗಮ್ಮ, ಮುಲ್ಲಂಗಿ ಛಾಯಾದೇವಿ, ಕೋರಿ ಮರಿಸ್ವಾಮಿ, ಎಸ್.ನೇಟಗಂಟೆಪ್ಪ, ಟಿ.ಬಿ.ಶಶಿಕಲಾ ಹಾಗೂ ರೈತರು ಹಾಗೂ ಸಿಬ್ಬಂದಿ ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101